ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೮೧

# ಪಟ್ಟಿ – ೦೨

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತ ನಾಲ್ಕನೇ ಅಧಿವೇಶನ

ಬುಧವಾರ, ದಿನಾಂಕ : ೦೭ನೇ ಫೆಬ್ರವರಿ, ೨೦೧೮

---

## ಸಮೂಹ – III

೧. ಕಂದಾಯ ಸಚಿವರು.

೨. ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು.

೩. ಅರಣ್ಯ ಸಚಿವರು.

೪. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು.

೫. ಕಾರ್ಮಿಕ ಸಚಿವರು.

೬. ವಸತಿ ಸಚಿವರು.

೭. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು.

---

## ವಸತಿ ಯೋಜನೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೮೧ (೧೬೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಕಲಬುರಗಿ ತಾಲ್ಲೂಕಿನ ಕೆಸರಟಗಿ ಗ್ರಾಮದ ಸರ್ವೆ ನಂ ೨೭ ಹಾಗೂ ೨೮ರಲ್ಲಿ ರಾಜೀವ್‌ಗಾಂಧಿ ಹಾಗೂ ವಾಜಪೇಯಿ ವಸತಿ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳ ನಿರ್ಮಾಣಕ್ಕಾಗಿ ಸರ್ಕಾರದಿಂದ ಆಗಿರುವ ವೆಚ್ಚ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಯೋಜನೆಯಡಿ ಆಯ್ಕೆಯಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ಫಲಾನುಭವಿಗಳ ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ನಿರ್ಮಾಣಗೊಂಡಿರುವ ಆಶ್ರಯ ಮನೆಗಳು ಇಲ್ಲಿಯವರೆಗೆ ಅರ್ಹ ಫಲಾನುಭವಿಗಳಿಗೆ ಹಸ್ತಾಂತರಗೊಳ್ಳದೆ ಇರುವುದಕ್ಕೆ ಕಾರಣವೇನು; (ಮಾಹಿತಿ ನೀಡುವುದು)

(ಈ) ೧೫ ವರ್ಷ ಗತಿಸಿದರೂ ಸದರಿ ಆಶ್ರಯ ಮನೆಗಳು ಅರ್ಹ ಫಲಾನುಭವಿಗಳಿಗೆ ಹಸ್ತಾಂತರಗೊಳ್ಳದೆ ನಿರ್ಮಾಣಗೊಂಡಿರುವ ಆಶ್ರಯ ಮನೆಗಳು ಶಿಥಿಲಾವಸ್ಥೆಯಲ್ಲಿರುವ ವಿಷಯ ಸರ್ಕಾರದ ಗಮನಕ್ಕೆ ಇದೆಯೇ; ಇದ್ದರೆ, ಈ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು? (ಮಾಹಿತಿ ನೀಡುವುದು)

## ೨೦೧೭-೧೮ನೇ ಸಾಲಿನಲ್ಲಿ ಘೋಷಣೆಯಾದ ಹೊಸ ತಾಲ್ಲೂಕಿನಲ್ಲಿ ಸೃಜಿಸಲಾಗಿರುವ ಹುದ್ದೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):-**

೮೨ (೧೪೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೭-೧೮ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದ ಹೊಸ ತಾಲ್ಲೂಕುಗಳ ಪೈಕಿ ಅಧಿಕೃತವಾಗಿ ಜಾರಿಗೆ ಬಂದಿರುವ ತಾಲ್ಲೂಕುಗಳು ಎಷ್ಟು; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಘೋಷಣೆ ಮಾಡಲಾದ ಹೊಸ ತಾಲ್ಲೂಕುಗಳ ಎಲ್ಲಾ ಇಲಾಖೆಗಳಲ್ಲಿ ಹೊಸದಾಗಿ ಹುದ್ದೆಗಳನ್ನು ಸೃಜಿಸಲಾಗಿದೆಯೇ; ಸೃಜಿಸಿದ್ದರೆ, ಹುದ್ದೆವಾರು ಸಂಪೂರ್ಣ ಮಾಹಿತಿ ನೀಡುವುದು; ಅಥವಾ ನಿಯೋಜನೆ ಮೇರೆಗೆ ಅಧಿಕಾರಿ/ಸಿಬ್ಬಂದಿಗಳಿಂದ ಆಡಳಿತ ನಡೆಸಲಾಗುವುದೇ? (ಸಂಪೂರ್ಣ ವಿವರ ನೀಡುವುದು)

## ತಾಲ್ಲೂಕು ಮಟ್ಟದ ಕ್ರೀಡಾಂಗಣಗಳ ನಿರ್ಮಾಣದ ಕಾಮಗಾರಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):-**

೮೩ (೧೪೨) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಈಶಾನ್ಯ ಪದವೀಧರ ಕ್ಷೇತ್ರದಡಿಯಲ್ಲಿ ತಾಲ್ಲೂಕು ಮಟ್ಟದ ಕ್ರೀಡಾಂಗಣಗಳು ನಿರ್ಮಾಣಗೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದರೆ, ತಾಲ್ಲೂಕುವಾರು ಮತ್ತು ಯೋಜನಾ ವೆಚ್ಚವಾರು ವಿವರ ನೀಡುವುದು;

(ಆ) ಸದರಿ ತಾಲ್ಲೂಕು ಕ್ರೀಡಾಂಗಣಗಳ ಕಳಪೆ ಮಟ್ಟದ ಕಾಮಗಾರಿಗಳ ಬಗ್ಗೆ ಮತ್ತು ಹಣಕಾಸಿನ ಅವ್ಯವಹಾರದ ಬಗ್ಗೆ ಅಥವಾ ಸಿಎಜಿ ವರದಿಗಳ ಆಧಾರಿತ ದೂರುಗಳು ಬಂದಿವೆಯೇ; ಬಂದಿದ್ದರೆ, ಕ್ರೀಡಾಂಗಣವಾರು ಸಂಪೂರ್ಣ ಮಾಹಿತಿ ನೀಡುವುದು;

(ಇ) ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮ ಹಾಗೂ ಹಣಕಾಸಿನಲ್ಲಿ ಆದಂತಹ ಅವ್ಯವಹಾರದ ನಷ್ಟದ ಹಣವನ್ನು ವಸೂಲಿ ಮಾಡಿರುವ ಬಗ್ಗೆ ಮಾಹಿತಿ ನೀಡುವುದು?

## ಹೈದರಾಬಾದ್–ಕರ್ನಾಟಕ ಭಾಗದಲ್ಲಿ ಕ್ರೀಡಾಪಟುಗಳಿಗಾಗಿ ಖರೀದಿಸಲಾದ ಸಾಮಗ್ರಿಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೮೪ (೧೪೧) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್ ಕರ್ನಾಟಕ ಪ್ರದೇಶದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಕಳೆದ ೨೦೧೩ ರಿಂದ ೨೦೧೭ರವರೆಗೆ ಕ್ರೀಡಾಪಟುಗಳಿಗಾಗಿ ಖರೀದಿಸಲಾದ ಸಾಮಗ್ರಿಗಳು ಯಾವುವು; (ಸಾಮಗ್ರಿವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಸಾಮಗ್ರಿಗಳ ಖರೀದಿಗಾಗಿ ಟೆಂಡರ್ ಕರೆಯಲಾಗಿದೆಯೇ; ಕರೆದಿದ್ದಲ್ಲಿ, ಟೆಂಡರ್ ಅಧಿಸೂಚನೆ ದಿನಾಂಕ ಹಾಗೂ ಟೆಂಡರ್‌ನಲ್ಲಿ ಭಾಗವಹಿಸಿದ ಸಂಸ್ಥೆಗಳ ಸಂಪೂರ್ಣ ಮಾಹಿತಿ ನೀಡುವುದು.

(ಇ) ಸಾಮಗ್ರಿಗಳ ಖರೀದಿಗಾಗಿ ತಗುಲಿದ ವೆಚ್ಚ ಎಷ್ಟು ಮತ್ತು ಯಾವ ಸಂಸ್ಥೆಯಿಂದ ಖರೀದಿಸಲಾಗಿದೆ; (ವಿವರ ನೀಡುವುದು)

(ಈ) ಸದರಿ ಖರೀದಿಸಲಾದ ಸಾಮಗ್ರಿಗಳು ಇಲ್ಲಿಯವರೆಗೆ ಬಳಕೆಯಾಗದೆ ಇರುವ ವಿಷಯ ಸರ್ಕಾರದ ಗಮನಕ್ಕೆ ಇದೆಯೇ; ಇದ್ದರೆ, ಬಳಕೆ ಮಾಡದೆ ಇರುವುದಕ್ಕೆ ಕಾರಣವೇನು; ಮಾಹಿತಿ ನೀಡುವುದು;

(ಉ) ಸದರಿ ಕ್ರೀಡಾಪಟುಗಳಿಗೆ ತರಬೇತುದಾರರನ್ನು ನೇಮಕ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದರೆ, ಯಾವ ಕಾಲಮಿತಿಯೊಳಗೆ ತರಬೇತುದಾರರನ್ನು ನೇಮಕ ಮಾಡಲಾಗುವುದು? (ಮಾಹಿತಿ ನೀಡುವುದು)

## ಖಾಲಿ ಇರುವ ಸೂಪರ್ ವೈಸರ್ ಹುದ್ದೆಗಳನ್ನು ತುಂಬುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೫ (೧೭೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭೂಮಾಪನ ಇಲಾಖೆಯಲ್ಲಿ ಖಾಲಿ ಇರುವ ಭೂಮಾಪಕರ ಹುದ್ದೆಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು)

(ಇ) ಭೂ ಮಾಪನ ಇಲಾಖೆಯಲ್ಲಿ ಖಾಲಿ ಇರುವ ಸೂಪರ್‌ವೈಸರ್ ಹುದ್ದೆಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಸೂಪರ್‌ವೈಸರ್ ಖಾಲಿ ಹುದ್ದೆಗಳಿಗಾಗಿ ಸಾರ್ವಜನಿಕರ ದಾಖಲಾತಿಗಳಿಗೆ ಸಹಿ ಮಾಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಹುದ್ದೆಗಳಿಗೆ ಕೂಡಲೇ ಮುಂಬಡ್ತಿ ನೀಡಿ ಸಾರ್ವಜನಿಕರಿಗಾಗುವ ತೊಂದರೆಯನ್ನು ತಪ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ: (ಮಾಹಿತಿ ನೀಡುವುದು)

(ಉ) ರೈತರ ಸಾರ್ವಜನಿಕರ ಭೂ ಸರ್ವೆ ಮಾಡಲು ಸರ್ವೆಯರುಗಳು ವಿಳಂಬ ನೀತಿ ಅನುಸರಿಸಿ ಲಂಚ, ರುಸುವತ್ತುಗಳಿಗೆ ಅಪೇಕ್ಷೆ ಪಡುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ತಪ್ಪಿತಸ್ಥರ ಮೇಲೆ ಕೈಗೊಂಡ ಕ್ರಮವೇನು? (ವಿವರ ನೀಡುವುದು)

## ಫಾರಂ ನಂ. ೫೦ ಹಾಗೂ ೫೩ರಲ್ಲಿ ಅರ್ಜಿ ಸಲ್ಲಿಕೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೬ (೧೧೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಫಾರಂ ನಂ.೫೦ ಹಾಗೂ ೫೩ರಲ್ಲಿ ಅರ್ಜಿ ಸಲ್ಲಿಸಿರುವ ಅಕ್ರಮ ಸಾಗುವಳಿದಾರರ ಸಂಖ್ಯೆ ಎಷ್ಟು;

(ಆ) ಈ ಅರ್ಜಿಗಳು ಯಾವ ಯಾವ ಜಮೀನುಗಳಿಗೆ ಸಂಬಂಧಪಟ್ಟಿವೆ; (ವಿವರ ನೀಡುವುದು)

(ಇ) ಈ ಪೈಕಿ "ಬಿ" ಕರಾಬಿಗೆ ಸಂಬಂಧಪಟ್ಟ ಅರ್ಜಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) "ಬಿ" ಕರಾಬು ಜಮೀನು ಮಂಜೂರು ಮಾಡಲು ಸರ್ಕಾರದ ಮಾನದಂಡಗಳೇನು; ಮಂಜೂರು ಮಾಡುವ ಬಗ್ಗೆ ಸರ್ಕಾರ ಆದೇಶ ಮಾಡಲು ಕ್ರಮಕೈಗೊಳ್ಳುವುದೇ; ಹಾಗಿದ್ದಲ್ಲಿ, ವಿವರ ನೀಡುವುದು?

## ಬರ ಪರಿಹಾರ ವಿತರಣೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೭ (೧೬೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯ ನಾಗಮಂಗಲ ವಿಧಾನಸಭಾ ಕ್ಷೇತ್ರವು ಸತತವಾಗಿ ಬರಗಾಲಕ್ಕೆ ತುತ್ತಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಬಾರಿ ಎಷ್ಟು ರೈತರನ್ನು ಬರ ಪರಿಹಾರಕ್ಕಾಗಿ ನೋಂದಾಯಿಸಲಾಗಿದೆ; (ಫಲಾನುಭವಿಗಳ ವಿವರ ನೀಡುವುದು)

(ಇ) ಈ ವಿಧಾನ ಸಭಾ ಕ್ಷೇತ್ರದಲ್ಲಿ ಒಟ್ಟು ಎಷ್ಟು ಎಕರೆ ಬೆಳೆ ನಾಶವಾಗಿದ್ದು ಎಷ್ಟು ಪರಿಹಾರ ಮಂಜೂರು ಮಾಡಲಾಗಿದೆ;

(ಈ) ನಾಗಮಂಗಲ ವಿಧಾನ ಸಭಾ ಕ್ಷೇತ್ರಕ್ಕೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ; (ರೈತರ ಸಂಪೂರ್ಣ ವಿವರ ನೀಡುವುದು)

(ಉ) ನೋಂದಣಿ ಮಾಡಿಸಿದ್ದರೂ ಕೂಡ ಹಣ ಬಿಡುಗಡೆಯಾಗದೇ ಇರುವ ರೈತರ ಸಂಖ್ಯೆ ಎಷ್ಟು? (ರೈತರ ವಿವರ ನೀಡುವುದು)

## ಹೇಮಾವತಿ ವಿಭಾಗದಿಂದ ಮಂಡ್ಯ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೮ (೧೧೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾವೇರಿ ನೀರಾವರಿ ನಿಗಮಕ್ಕೆ ಸೇರಿರುವ ಹೇಮಾವತಿ ವಿಭಾಗಕ್ಕೆ ಮಂಡ್ಯ ಜಿಲ್ಲೆಗೆ ಸೇರಿರುವ ಪುನರ್ ವಸತಿ ತಾಲ್ಲೂಕುಗಳಿಗೆ ೨೦೧೬–೧೭ನೇ ಸಾಲಿನಲ್ಲಿ ಯಾವ ಯಾವ ತಾಲ್ಲೂಕುಗಳಿಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ; (ಪೂರ್ಣ ವಿವರ ನೀಡುವುದು)

(ಆ) ನಿಗಮಕ್ಕೆ ಸೇರಿರುವ ಹೇಮಾವತಿ ವಿಭಾಗ ಮಂಡ್ಯ ಜಿಲ್ಲೆಗೆ ಸೇರಿರುವ ಪುನರ್ ವಸತಿ ತಾಲ್ಲೂಕುಗಳಿಗೆ ೨೦೧೬–೧೭ನೇ ಸಾಲಿನಲ್ಲಿ ಯಾವ ಯಾವ ತಾಲ್ಲೂಕುಗಳಿಗೆ ಎಷ್ಟು ಎಸ್.ಸಿ.ಪಿ/ ಟಿ.ಎಸ್.ಪಿ ಗಳಿಗೆ ಅನುದಾನ ಮಂಜೂರಾಗಿದೆ? (ಪೂರ್ಣ ವಿವರ ನೀಡುವುದು)

## ಕಂದಾಯ ಗ್ರಾಮಗಳ ಘೋಷಣೆ ಮತ್ತು ಅಭಿವೃದ್ಧಿ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೮೯ (೧೭೨, ೧೭೩, ೧೭೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಕಂದಾಯ ಗ್ರಾಮಗಳನ್ನು ಘೋಷಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇಲ್ಲಿಯವರೆಗೂ ಎಷ್ಟು ಕಂದಾಯ ಗ್ರಾಮಗಳನ್ನು ಘೋಷಿಸಲಾಗಿದೆ;

(ಆ) ಕಂದಾಯ ಗ್ರಾಮಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಯಚೂರು ಜಿಲ್ಲೆಯಲ್ಲಿರುವ ಕ್ಯಾಂಪ ಮತ್ತು ತಾಂಡಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು ಯಾವಾಗ; ಈ ನಿಟ್ಟಿನಲ್ಲಿ ಸರ್ಕಾರದ ನಿಲುವೇನು? (ವಿವರ ನೀಡುವುದು)

(ಈ) ರಾಯಚೂರು ನಗರ ಮತ್ತು ರಾಯಚೂರು ಗ್ರಾಮಾಂತರ ಹಾಗೂ ಮಾನ್ವಿ ವಿಧಾನಸಭಾ ಕ್ಷೇತ್ರಗಳಿಗೆ ೨೦೧೭–೧೮ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಗಳ ಮುಖಾಂತರ ಮಂಜೂರಾಗಿರುವ ಮನೆಗಳ ಸಂಖ್ಯೆ ಎಷ್ಟು; (ಯೋಜನಾವಾರು ವಿವರ ನೀಡುವುದು)

(ಉ) ಮಾನ್ವಿ ತಾಲ್ಲೂಕಿನ ಮಾದಲಾಪೂರ ಮತ್ತು ದದ್ದಲ ಏತನೀರಾವರಿ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಈ ಎರಡೂ ಏತನೀರಾವರಿಯಿಂದ ನಿಗದಿತ ಸಮಯದಲ್ಲೂ ರೈತರಿಗೆ ನೀರು ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಊ) ರಾಯಚೂರು ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಸೇರಿರುವ ಕೆರೆಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಒಲಂಪಿಕ್ಸ್‌ನಲ್ಲಿ ಪದಕ ವಿಜೇತರಿಗೆ ನಗದು ಪುರಸ್ಕಾರ ನೀಡುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-**

೯೦ (೧೨೬) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಒಲಂಪಿಕ್ಸ್‌ನಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ನಗದು ಪುರಸ್ಕಾರ ನೀಡುವುದಾಗಿ ಘೋಷಣೆಯನ್ನು ಯಾವಾಗ ಮಾಡಿದೆ;

(ಆ) ಈ ಘೋಷಣೆ ಮಾಡಿ ಮೂರು ವರ್ಷಗಳಾಗಿದ್ದರೂ ಇದುವರೆಗೆ ಕ್ರೀಡಾಪಟುಗಳಿಗೆ ನಗದು ಪುರಸ್ಕಾರ ನೀಡದಿರಲು ಕಾರಣಗಳೇನು;

(ಇ) ಒಲಂಪಿಕ್ಸ್‌ನಲ್ಲಿ ವಿಜೇತರಾದವರಿಗೆ ಯಾವ ಯಾವ ಪ್ರಮಾಣದ ನಗದು ಬಹುಮಾನಗಳನ್ನು ಸರಕಾರ ಘೋಷಿಸಿತ್ತು?

## ಧಾರವಾಡದ ರಾಯಾಪುರದಲ್ಲಿ ಎನ್.ಜಿ.ಇ.ಎಫ್. ಕಾರ್ಖಾನೆಯ ಕಾರ್ಮಿಕರಿಗೆ ಸೇವಾ ಭದ್ರತೆ ಒದಗಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-**

೯೧ (೧೨೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಧಾರವಾಡದ ಎನ್.ಜಿ.ಇ.ಎಫ್ (ಹು)ಲಿ ಕಾರ್ಖಾನೆಯು ಯಾವ ವರ್ಷದಿಂದ ಕಾರ್ಯನಿರ್ವಹಿಸುತ್ತಿದೆ.

(ಆ) ಈ ಕಾರ್ಖಾನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಇ) ಈ ಕಾರ್ಖಾನೆಯು ಉತ್ಪಾದನೆ ವರ್ಷದಿಂದ ವರ್ಷಕ್ಕೆ ಕುಂಟಿತಗೊಳ್ಳುತ್ತಿರುವುದರಿಂದ ಇಲ್ಲಿನ ಸಿಬ್ಬಂದಿಗಳನ್ನು ಬೇರೆ ನಿಗಮಗಳಿಗೆ ನಿಯೋಜಿಸಿರುವುದು ನಿಜವೇ; ಹಾಗಿದ್ದಲ್ಲಿ, ಎಷ್ಟು ಜನ ಸಿಬ್ಬಂದಿಗಳನ್ನು ಬೇರೆ ಕಂಪನಿಗಳಿಗೆ ನಿಯೋಜಿಸಲಾಗಿದೆ;

(ಈ) ಕಾರ್ಖಾನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ನಿಯಮಾನುಸಾರ ವೇತನವನ್ನು ಪಾವತಿಸಲಾಗುತ್ತಿದೆಯೇ; ವೇತನ ಪಾವತಿಗೆ ವಿಳಂಬವಾಗಲು ಕಾರಣಗಳೇನು;

(ಉ) ಕಾರ್ಖಾನೆಯ ಉತ್ಪಾದನೆ ಸಂಪೂರ್ಣವಾಗಿ ಕುಸಿದಿರುವುದರಿಂದ ಇಲ್ಲಿನ ಸಿಬ್ಬಂದಿಗಳಿಗೆ ವೇತನ ಸಂರಕ್ಷಣೆ ನೀಡಿ ಸರಕಾರದ ಅಧೀನದ ಇಲಾಖೆಗೆ ನಿಯುಕ್ತಿಗೊಳಿಸುವುದರೊಂದಿಗೆ ಸಿಬ್ಬಂದಿಗಳಿಗೆ ಶಾಶ್ವತ ಸೇವಾ ಭದ್ರತೆ ನೀಡಲು ಸರಕಾರ ಅಗತ್ಯ ಕ್ರಮಕೈಗೊಳ್ಳುವುದೇ?

## ಹನಿ ನೀರಾವರಿ ಯೋಜನೆಯ ಕಾಮಗಾರಿಗಳ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೨ (೧೧೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಹನಿ ನೀರಾವರಿ ಯೋಜನೆಯಲ್ಲಿ ಕೈಗೊಂಡಿರುವ ಕಾಮಗಾರಿಗಳಾವುವು; ಅದಕ್ಕೆ ಖರ್ಚಾಗಿರುವ ಹಣವೆಷ್ಟು; (ಕಳೆದ ೨ ವರ್ಷಗಳ ಮಾಹಿತಿ ನೀಡುವುದು)

(ಆ) ಈ ಕಾಮಗಾರಿಗಳಿಂದ ಪ್ರಯೋಜನ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಕಾಮಗಾರಿಗಳನ್ನು ಜಾರಿ ಮಾಡುವಲ್ಲಿ ಅಕ್ರಮಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದರೆ, ಕೈಗೊಳ್ಳಲಾಗಿರುವ ಕ್ರಮಗಳೇನು?

## ಸರ್ವೆ ಕಾರ್ಯ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩ (೧೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಇಲಾಖೆಯಲ್ಲಿ ಸರ್ವೇಯರುಗಳು ಸರ್ವೆ ಕಾರ್ಯ ಮಾಡಲು ವಿಳಂಬ ಮಾಡುತ್ತಿರುವುದರಿಂದ ರೈತರಿಗೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸರ್ವೇಯರುಗಳ ಕೊರತೆಯಿಂದ ನಿಧಾನವಾಗುತ್ತಿದ್ದರೆ ಈ ಕೊರತೆಯನ್ನು ಸರಿಪಡಿಸಿ ಸರ್ವೆ ಕಾರ್ಯ ಬೇಗ ಆಗುವಂತೆ ಮಾಡಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳಲಿದೆ;

(ಇ) ಪ್ರತಿ ವರ್ಷ ಈ ಸಮಸ್ಯೆಯನ್ನು ಸರ್ಕಾರದ ಗಮನಕ್ಕೆ ತಂದು ಸರ್ವೆ ಕಾರ್ಯ ಬೇಗ ಆಗುವಂತೆ ವ್ಯವಸ್ಥೆ ಮಾಡಬೇಕೆಂದು ಸಾರ್ವಜನಿಕರಿಂದ ಒತ್ತಾಯ ಇರುವುದರಿಂದ ವಿಶೇಷ ಕಾಳಜಿ ವಹಿಸಿ ಸರ್ಕಾರ ಯಾವ ಕಾರ್ಯಕ್ರಮ ಹಾಕಿಕೊಳ್ಳುತ್ತದೆ?

## ಅಸಂಘಟಿತ ಕಾರ್ಮಿಕರಿಗೆ ಭವಿಷ್ಯದಲ್ಲಿ ಪಿಂಚಣಿ ಯೋಜನೆ ಅನುಷ್ಠಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೯೪ (೯೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಸಂಘಟಿತ ಕಾರ್ಮಿಕರಿಗೆ ಭವಿಷ್ಯದಲ್ಲಿ ಪಿಂಚಣಿ ಯೋಜನೆಯನ್ನು ಕಾರ್ಯರೂಪಕ್ಕೆ ತರಲು ಆಯವ್ಯಯದಲ್ಲಿ ಘೋಷಿಸಿದ್ದು, ಇದನ್ನು ಅನುಷ್ಠಾನಕ್ಕೆ ತರಲಾಗಿದೆಯೇ;

(ಆ) ಈ ಯೋಜನೆಗಾಗಿ ಮೀಸಲಿಟ್ಟ ಹಣವೆಷ್ಟು;

(ಇ) ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ಹೊರಡಿಸಿರುವ ಮಾರ್ಗಸೂಚಿಗಳ ವಿವರವಾದ ಮಾಹಿತಿಯನ್ನು ಒದಗಿಸುವುದು;

(ಈ) ಇಲ್ಲವಾದಲ್ಲಿ ಈ ಯೋಜನೆಯನ್ನು ಜಾರಿಗೆ ತರಲು ಸರ್ಕಾರಕ್ಕೆ ಇರುವ ಸಮಸ್ಯೆಗಳೇನು?

## ಕರ್ನಾಟಕ ಭೂಸುಧಾರಣಾ ನಿಯಮ ೧೯೬೪ ಕಲಂ, ೯೪ಸಿ ಮತ್ತು ೯೪ಸಿಸಿ ಮೇಲೆ ಕ್ರಮದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೯೫ (೧೪೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಭೂಸುಧಾರಣಾ ನಿಯಮದ ೧೯೬೪ ಕಲಂ ೯೪ಸಿ ಮತ್ತು ೯೪ಸಿಸಿ ಪ್ರಕಾರ ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಎಷ್ಟು ಜನರಿಗೆ ಮನೆಗಳನ್ನು ಸಕ್ರಮಗೊಳಿಸಲಾಗಿದೆ;

(ಆ) ಈ ರೀತಿ ಸಕ್ರಮಗೊಳಿಸಿದ ಫಲಾನುಭವಿಗಳಲ್ಲಿ ಎಸ್.ಸಿ/ಎಸ್.ಟಿ ವರ್ಗದವರ ವಿವರವಾದ ಮಾಹಿತಿಯನ್ನು ಒದಗಿಸುವುದು;

(ಇ) ಈ ಕಾನೂನಿನಡಿಯಲ್ಲಿ ಇನ್ನೂ ಸಕ್ರಮಗೊಳಿಸಬೇಕಾದ ಮನೆಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಗ್ರಾಮೀಣ ಪ್ರದೇಶಗಳಲ್ಲಿ ನಿರ್ಮಿಸಿದ ಮನೆಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೯೬ (೧೬೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನ ಆಯುವ್ಯಯದಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಎಷ್ಟು ಮನೆಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ;

(ಆ) ಗ್ರಾಮೀಣ ಪ್ರದೇಶಗಳಲ್ಲಿ ನಿರ್ಮಿಸಲು ಉದ್ದೇಶಿಸಿರುವ ಮನೆಗಳಲ್ಲಿ ಈವರೆಗೆ ಎಷ್ಟು ಮನೆಗಳನ್ನು ಪೂರ್ಣಗೊಳಿಸಿರುವುದಿಲ್ಲ; ಇದಕ್ಕೆ ಕಾರಣಗಳೇನು;

(ಇ) ಈ ಯೋಜನೆಯಡಿಯಲ್ಲಿ ಪೂರ್ಣಗೊಳಿಸಿರುವ ಹಾಗೂ ಮುಕ್ತಾಯದ ಹಂತದಲ್ಲಿರುವ ಮನೆಗಳ ಸಂಖ್ಯೆ ಎಷ್ಟು;

(ಈ) ಈ ಯೋಜನೆಯುನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು?

## ಮುಖ್ಯ ಮಂತ್ರಿಗಳ ಕೌಶಲ್ಯ ಅಭಿವೃದ್ಧಿ ಯೋಜನೆಯಡಿ ಉದ್ಯೋಗವಕಾಶದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೯೭ (೧೬೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮುಖ್ಯಮಂತ್ರಿಗಳ ಕೌಶಲ್ಯ ಅಭಿವೃದ್ಧಿ ಯೋಜನೆಯಡಿಯಲ್ಲಿ ಈವರೆಗೆ ರಾಜ್ಯದಲ್ಲಿ ಎಷ್ಟು ಲಕ್ಷ ಯುವ ಜನತೆಗೆ ತರಬೇತಿ ನೀಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ರೀತಿ ತರಬೇತಿ ನೀಡಿದ ಯುವ ಜನತೆಯಲ್ಲಿ ಎಷ್ಟು ಜನರಿಗೆ ಉದ್ಯೋಗವನ್ನು ಒದಗಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಮುಖ್ಯಮಂತ್ರಿಗಳ ಕೌಶಲ್ಯ ಅಭಿವೃದ್ಧಿ ಯೋಜನೆ ೨೦೧೭-೧೮ರಲ್ಲಿ ಒದಗಿಸಿರುವ ಅನುದಾನವೆಷ್ಟು; ಇದರಲ್ಲಿ ವ್ಯಯ ಮಾಡಲಾದ ಮೊತ್ತ ಎಷ್ಟು?

## ಅಸಂಘಟಿತ ಕಾರ್ಮಿಕರ ಸ್ಥಿತಿಗತಿ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೯೮ (೧೪೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಿತ್ರದುರ್ಗ ಜಿಲ್ಲೆಯಲ್ಲಿರುವ ಒಟ್ಟು ಅಸಂಘಟಿತ ಕಾರ್ಮಿಕರ ಸಂಖ್ಯೆ ಎಷ್ಟು; ಇವರಲ್ಲಿ ಕಟ್ಟಡ ಕಾರ್ಮಿಕರು, ಬೀಡಿ ಕಾರ್ಮಿಕರ ಸಂಖ್ಯೆ ಎಷ್ಟು;

(ಆ) ೨೦೧೭-೧೮ನೇ ಸಾಲಿನಲ್ಲಿ ಅಸಂಘಟಿತ ಕಾರ್ಮಿಕರಿಗೆ ಕರ್ನಾಟಕ ರಾಜ್ಯದಾದ್ಯಂತ ಯಾವ ಯಾವ ಕಾರ್ಯ ಕ್ರಮಗಳನ್ನು ಕಾರ್ಮಿಕ ಇಲಾಖೆ ವತಿಯಿಂದ ಹಮ್ಮಿಕೊಂಡಿದೆ? (ವಿವರ ನೀಡುವುದು)

## ಚಳ್ಳಕೆರೆ ತಾಲ್ಲೂಕಿನ ಕೆರೆಗಳಿಗೆ ನೀರು ತುಂಬಿಸುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೯೯ (೧೫೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಲ್ಲಿ ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ಹಾಗೂ ಮೊಳಕಾಲ್ಮೂರು ತಾಲ್ಲೂಕುಗಳಲ್ಲಿನ ಎಷ್ಟು ಕೆರೆಗಳಿಗೆ ನೀರು ತುಂಬಿಸಲಾಗಿದೆ;

(ಆ) ೨೦೧೭–೧೮ನೇ ಸಾಲಿನಲ್ಲಿ ರೇಖಲಗೆರೆ ಫೀಡರ್ ಚಾನೆಲ್‌ನಿಂದ ಎಷ್ಟು ಕೆರೆಗಳಿಗೆ ನೀರು ತುಂಬಿಸಲಾಗಿದೆ;

(ಇ) ರೇಖಲಗೆರೆ ಫೀಡರ್ ಚಾನೆಲ್ ದುರಸ್ಥಿಗೆ ಈವರೆಗೆ ಕೈಗೊಂಡಿರುವ ಕ್ರಮಗಳೇನು?

## ಬಗರ್‌ಹುಕುಂ ಜಾಗ ಮಂಜೂರಾತಿ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೦ (೯೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆ ಸೊರಬ ತಾಲ್ಲೂಕಿನಲ್ಲಿ ಬಗರ್‌ಹುಕುಂ ಜಾಗದ ಮಂಜೂರಾತಿಗಾಗಿ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು; (ಅರ್ಜಿ ಸಂಖ್ಯೆ, ಅರ್ಜಿದಾರರ ಹೆಸರು, ವಿಳಾಸ, ಜಮೀನಿನ ಮಾದರಿ, ಸರ್ವೆ ನಂಬರ್‌ರೊಂದಿಗೆ ಪೂರ್ಣ ಮಾಹಿತಿಯನ್ನು ಹೋಬಳಿವಾರು ವಿವರ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಜನರಿಗೆ ಹಕ್ಕು ಪತ್ರ ನೀಡಲಾಗಿದೆ, ಹಕ್ಕು ಪತ್ರ ಪಡೆದವರ ಹೆಸರು, ವಿಳಾಸ, ದಿನಾಂಕ, ವಿಸ್ತೀರ್ಣ, ಸರ್ವೆನಂಬರ್, ಸಹಿತ ಜಮೀನಿನ ಮಾದರಿಯೊಂದಿಗೆ ಹೋಬಳಿವಾರು ವಿವರ ನೀಡುವುದು;

(ಇ) ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು, ಅರ್ಜಿದಾರರ ಹೆಸರು, ವಿಳಾಸ, ಜಮೀನಿನ ಮಾದರಿ, ಸರ್ವೆನಂಬರ್‌ನೊಂದಿಗೆ ಪೂರ್ಣ ಮಾಹಿತಿಯನ್ನು ಹೋಬಳಿವಾರು ವಿವರ ಒದಗಿಸುವುದು;

(ಈ) ಬಾಕಿ ಅರ್ಜಿಗಳನ್ನು ವಿಲೇ ಇಡಲು ಕಾರಣವೇನು; ಈ ಬಗ್ಗೆ ಕೈಗೊಂಡ ಕ್ರಮವೇನು? (ವಿವರ ನೀಡುವುದು)

## ಕರಾವಳಿಯ ತೀರ ಪ್ರದೇಶದ ಮೀನುಗಾರರಿಗೆ ಸಿ.ಆರ್.ಜೆಡ್ ನಿಂದ ತೊಂದರೆಯಾಗುತ್ತಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೧ (೯೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಮುದ್ರದ ಅಂಚಿನಲ್ಲಿ ವಾಸವಿರುವ ಮೀನುಗಾರರಿಗೆ ಅವರ ಬದುಕಿನ ಭದ್ರತೆಯ ವಿಚಾರದಲ್ಲಿ ಸಿ.ಆರ್.ಜೆಡ್ ಸಮಸ್ಯೆಯಿಂದಾಗಿ ವಾಸ್ತವ್ಯದ ಹಕ್ಕು ಪತ್ರ ಸಿಗದೇ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಗೋವಾ ಕೇರಳ ಮಾದರಿಯಲ್ಲಿ ಸಿ.ಆರ್.ಜೆಡ್. ಮಿತಿಯನ್ನು ೫೦ ಮೀಟರ್ ಗೆ ನಿಗದಿಪಡಿಸಲು ರಾಜ್ಯ ಸರ್ಕಾರವು ಕೇಂದ್ರದ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುವುದು ನಿಜವೇ; ನಿಜವಾಗಿದ್ದಲ್ಲಿ ಎಷ್ಟು ಪ್ರಸ್ತಾವನೆಗಳನ್ನು ಯಾವ ಯಾವ ವರ್ಷದಲ್ಲಿ ಸರ್ಕಾರಕ್ಕೆ ಸಲ್ಲಿಸಲಾಗಿದೆ;

(ಇ) ಕೇಂದ್ರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯ ಮುಖ್ಯಾಂಶವೇನು;

(ಈ) ಕೇಂದ್ರವು ಕೇರಳ ಮತ್ತು ಗೋವಾ ರಾಜ್ಯಕ್ಕೆ ಸಿ.ಆರ್.ಜೆಡ್. ನ್ನು ೫೦ ಮೀ.ಗೆ ಮಿತಿಗೊಳಿಸಿ ಅನುಮೋದನೆ ನೀಡಿದ ನಂತರ ಕರ್ನಾಟಕ ರಾಜ್ಯಕ್ಕೆ ಅದೇ ಮಾದರಿಯಲ್ಲಿ ಅನುಮತಿ ನೀಡಲು ವಿಳಂಬವಾಗಲು ಕಾರಣಗಳೇನು;

(ಉ) ಮೀನುಗಾರರು/ಸ್ಥಳೀಯ ಕರಾವಳಿಯ ನಿವಾಸಿಗಳ ಹಿತ ಕಾಪಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ವಿವರ ನೀಡುವುದು)

## ಕಂದಾಯ ಇಲಾಖೆಯ ವಿವಿಧ ಸ್ತರಗಳ ಖಾಲಿ ಹುದ್ದೆ ನೇಮಕದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೨ (೧೩೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಂದಾಯ ಇಲಾಖೆಯಲ್ಲಿ ಮಂಜೂರಾಗಿರುವ ಖಾಲಿಯಿರುವ ತಹಶೀಲ್ದಾರರು, ಉಪ ತಹಶೀಲ್ದಾರರು, ಕಂದಾಯ ನಿರೀಕ್ಷಕರು, ಗ್ರಾಮಲೆಕ್ಕಿಗರು, ಪ್ರಥಮ ಮತ್ತು ದ್ವಿತೀಯ ದರ್ಜೆ ಸಹಾಯಕರುಗಳ ಹುದ್ದೆಗಳೆಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ನೇರ ನೇಮಕಾತಿಯಿಂದ ಆಯ್ಕೆಯಾದ ಒಟ್ಟು ಎಷ್ಟು ಮಂದಿ ತಹಶೀಲ್ದಾರರು ಕರ್ತವ್ಯ ನಿರ್ವಹಿಸುತ್ತಿದ್ದಾರೆ; ಪ್ರಭಾರದಲ್ಲಿರುವವರ ಸಂಖ್ಯೆ ಎಷ್ಟು;

(ಇ) ಗ್ರಾಮ ಲೆಕ್ಕಿಗರು ಮತ್ತು ಕಂದಾಯ ನಿರೀಕ್ಷಕರನ್ನು ಅನ್ಯ ಕಛೇರಿಗಳಿಗೆ ನಿಯೋಜನೆ ಮಾಡುವುದು ಮತ್ತು ಮೂರು–ನಾಲ್ಕು ಗ್ರಾಮಗಳ ಪ್ರಭಾರ ನೀಡುತ್ತಿರುವುದರಿಂದ ಗ್ರಾಮದ ಕಛೇರಿಯಲ್ಲಿ ಸಾರ್ವಜನಿಕರ ಕೆಲಸಗಳಿಗೆ ಲಭ್ಯವಿರದೆ ಸಾರ್ವಜನಿಕರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಖಾಲಿ ಹುದ್ದೆಯಿಂದಾಗಿ ಸಾಮಾಜಿಕ ಭದ್ರತಾ ಯೋಜನೆಗಳು, ಬೆಳೆ ಪರಿಹಾರ ಸೇರಿದಂತೆ ಅನೇಕ ಯೊಜನೆಗಳು ನೈಜ ಫಲಾನುಭವಿಗಳನ್ನು ತಲುಪುವಲ್ಲಿ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಕನಿಷ್ಠ ಪ್ರತಿ ಗ್ರಾಮಕ್ಕೆ/ಗ್ರಾಮಪಂಚಾಯತ್‌ಗೆ ಒಬ್ಬರಂತೆ ಗ್ರಾಮ ಲೆಕ್ಕಿಗರನ್ನು ಸೇರಿದಂತೆ ಕಂದಾಯ ಇಲಾಖೆಯ ವಿವಿಧ ಸ್ತರದ ಖಾಲಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಶೀಘ್ರ ಭರ್ತಿ ಮಾಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ವರಾಹಿ ಯೋಜನೆಯಿಂದ ಉಡುಪಿಗೆ ಕುಡಿಯುವ ನೀರು ಒದಗಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೩ (೧೩೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ಸರ್ಕಾರ ಬಂದ ಮೇಲೆ ವರಾಹಿ ಯೋಜನೆಗಾಗಿ ಆಯವ್ಯಯದಲ್ಲಿ ಎಷ್ಟು ಅನುದಾನ ಒದಗಿಸಲಾಗಿದೆ; ಎಷ್ಟು ಅನುದಾನ ಬಿಡುಗಡೆಯಾಗಿದೆ ; ಆ ಪೈಕಿ ಎಷ್ಟು ಅನುದಾನ ಖರ್ಚಾಗಿದೆ; (ವರ್ಷಾವಾರು ವಿವರ ನೀಡುವುದು)

(ಆ) ವರಾಹಿ ಯೋಜನೆಯಲ್ಲಿ ಲಭ್ಯವಾಗುವ ನೀರನ್ನು ಪೈಪ್‌ಲೈನ್ ಮೂಲಕ ಉಡುಪಿವರೆಗೆ ಕುಡಿಯುವ ನೀರಿಗಾಗಿ ತರುವ ಯೋಜನೆಯ ಪ್ರಸ್ತಾವನೆ ಯಾವ ಹಂತದಲ್ಲಿದೆ; ಸದರಿ ಯೋಜನೆಯ ರೂಪು ರೇಷೆಗಳೇನು;

(ಇ) ಪ್ರಸ್ತಾವನೆ ಹಂತದಲ್ಲಿರುವ, ವರಾಹಿಯಿಂದ ಉಡುಪಿವರೆಗೆ ಕುಡಿಯುವ ನೀರಿಗಾಗಿ ತರುವ ನೀರಿನ ಪೈಪ್‌ಲೈನ್ ಹಾದು ಹೋಗುವ ಗ್ರಾಮಗಳಿಗೂ ಕುಡಿಯುವ ನೀರು ಸರಬರಾಜು ಮಾಡಲಾಗುವುದೇ; (ವಿವರ ನೀಡುವುದು)

(ಈ) ವರಾಹಿಯಿಂದ ಉಡುಪಿವರೆಗೆ ಕುಡಿಯುವ ನೀರು ಸರಬರಾಜು ಮಾಡುವ ಯೋಜನೆ ಯಾವಾಗ ಅನುಷ್ಠಾನ ಮಾಡಲಾಗುವುದು? (ಸಂಪೂರ್ಣ ವಿವರ ನೀಡುವುದು)

## ಪ್ರಧಾನ ಮಂತ್ರಿ ಆವಾಸ್ ವತಿ ಯೋಜನೆಯ ಅನುಷ್ಠಾನದ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೪ (೧೧೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಧಾನಮಂತ್ರಿ ಆವಾಸ್ ವಸತಿ ಯೋಜನೆಯಡಿ ಕರ್ನಾಟಕ ರಾಜ್ಯದಲ್ಲಿ ನಿಗದಿತ ಅವಧಿಯಲ್ಲಿ ಫಲಾನುಭವಿಗಳಿಗೆ ಮನೆಗಳು ನಿರ್ಮಾಣವಾಗದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಪ್ರಧಾನಮಂತ್ರಿ ಆವಾಸ್ ಯೋಜನೆಯಡಿಯಲ್ಲಿ ಇದುವರೆವಿಗೂ ಬಿಡುಗಡೆಯಾದ ಹಣ ಎಷ್ಟು;

(ಇ) ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಬಿಡುಗಡೆಯಾದ ಹಣದಲ್ಲಿ ರೂಪಿಸಿರುವ ಕ್ರಿಯಾ ಯೋಜನೆಗಳು ಯಾವುವು; (ವಿವರ ನೀಡುವುದು)

(ಈ) ಈ ಯೋಜನೆಯ ಅಡಿಯಲ್ಲಿ ನಿರ್ಮಾಣಗೊಳ್ಳಲಿರುವ ಮನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಉ) ಈ ಯೋಜನೆಯಡಿ ಬೆಳಗಾವಿ ಜಿಲ್ಲೆಯ, ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಿಗೆ ಬಿಡುಗಡೆಯಾದ ಅನುದಾನದಲ್ಲಿ ಎಷ್ಟು ಖರ್ಚು ಮಾಡಲಾಗಿದೆ; ಬೆಳಗಾವಿ ಮಹಾನಗರ ಪಾಲಿಕೆಗೆ ಸದರಿ ಯೋಜನೆಯಡಿ ಬಿಡುಗಡೆಯಾದ ಅನುದಾನವೆಷ್ಟು;

(ಊ) ಈ ಯೋಜನೆಯಡಿ ಬಿಡುಗಡೆಯಾದ ಹಣದಲ್ಲಿ ಬೆಂಗಳೂರು ನಗರ ಸೇರಿದಂತೆ ಯಾವ ಯಾವ ಜಿಲ್ಲೆ ತಾಲ್ಲೂಕುಗಳಿಗೆ ಅನುದಾನ ಖರ್ಚು ಮಾಡಲಾಗುತ್ತಿದೆ; ಎಷ್ಟು ಖರ್ಚು ಮಾಡುಲಾಗುತ್ತಿದೆ?

## ರಾಜ್ಯದ ನ್ಯಾಯಾಲಯಗಳಲ್ಲಿ ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ಹುದ್ದೆಗಳು ಖಾಲಿ ಇರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೫ (೧೨೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ನ್ಯಾಯಾಲಯುಗಳಲ್ಲಿ ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ಹುದ್ದೆಗಳು ಖಾಲಿ ಇರುವುದರಿಂದ ಪ್ರಕರಣಗಳನ್ನು ಇತ್ಯರ್ಥಪಡಿಸಲು ವಿಳಂಬವಾಗುತ್ತಿರುವ ವಿಚಾರ ಸರಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಒಟ್ಟು ಎಷ್ಟು ಪಬ್ಲಿಕ್ ಪ್ರಾಸಿಕ್ಯೂಟರ್/ ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ಹುದ್ದೆಗಳು ಮಂಜೂರಾಗಿವೆ; ಅವುಗಳಲ್ಲಿ ಎಷ್ಟು ಹುದ್ದೆಗಳು ಭರ್ತಿಯಾಗಿವೆ; ಎಷ್ಟು ಖಾಲಿ ಇವೆ; (ವಿವರ ನೀಡುವುದು)

(ಇ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಇರುವ ತಾಂತ್ರಿಕ ತೊಂದರೆಗಳೇನು;

(ಈ) ಖಾಲಿ ಇರುವ ಪಬ್ಲಿಕ್ ಪ್ರಾಸಿಕ್ಯೂಟರ್/ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು?

## ಬಳ್ಳಾರಿ ನಾಲಾ ಕಾಮಗಾರಿ ಕುಂಠಿತವಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೬ (೧೨೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಬಳ್ಳಾರಿ ನಾಲಾ ಕಾಮಗಾರಿಯು ಪೂರ್ಣಗೊಳ್ಳದೆ ಇರುವುದರಿಂದ ಆ ಭಾಗದ ರೈತರಿಗೆ ತೊಂದರೆ ಆಗುತ್ತಿರುವ ವಿಚಾರ ಸರಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಬಳ್ಳಾರಿ ನಾಲಾ ಯೋಜನೆಗೆ ಬಿಡುಗಡೆಯಾದ ಅನುದಾನ ಎಷ್ಟು; ಅದರಲ್ಲಿ ಬಳಕೆ ಮಾಡಲಾದ ಅನುದಾನವೆಷ್ಟು;

(ಇ) ಬಳ್ಳಾರಿ ನಾಲಾ ಯೋಜನೆಯಿಂದ ಎಷ್ಟು ಹೆಕ್ಟೇರ್ ಪ್ರದೇಶ ನೀರಾವರಿಗೆ ಒಳಪಡಲಿದೆ;

(ಈ) ಯಾವ ಕಾಲಮಿತಿಯಲ್ಲಿ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು?

## ಬೆಳಗಾವಿ ದಕ್ಷಿಣ ವಿಧಾನ ಸಭಾಕ್ಷೇತ್ರದಲ್ಲಿ ಬರುವ ಸರ್ಕಾರಿ ಗೋಮಾಳದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ, (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೦೭ (೧೫೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ಮತ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಗೋಮಾಳ ಹಾಗೂ ಸರ್ಕಾರಿ ಗಯರಣ ಇತ್ಯಾದಿ ಖಾಲಿ ಉಳಿದಿರುವ ವಿಸ್ತೀರ್ಣದ ಬಗ್ಗೆ ಮಾಹಿತಿ ನೀಡುವುದು;

(ಆ) ಯಾವ್ಯಾವ ಸರ್ವೆ ನಂ. ನಲ್ಲಿ ಎಷ್ಟು ಜಾಗ ಉಳಿದಿದೆ? (ಪೂರ್ಣ ವಿವರ ನೀಡುವುದು)

## ರೈತರಿಗೆ ಸಾಗುವಳಿ ಚೀಟಿ ಹಂಚಿಕೆಯಾದ ಜಮೀನಿನ ಮೇಲೆ ದಾಖಲಿಸಿದ ಪ್ರಕರಣದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೮ (೧೨೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ ತಾಲ್ಲೂಕು, ಜಾಲ ಹೋಬಳಿ, ಮರಳುಗುಂಟೆ ಗ್ರಾಮದ ಸರ್ವೆ ನಂ. ೫೦ರಲ್ಲಿ ಸುಮಾರು ಎಕರೆ ಜಮೀನು ಕೆಲವೇ ರೈತರಿಗೆ ಮಾತ್ರ ಸಾಗುವಳಿ ಚೀಟಿಯನ್ನು ಹಂಚಿಕೆ ಮಾಡಲಾಗಿರುತ್ತದೆ. ಸದರಿ ಹಂಚಿಕೆಯಾಗಿರುವ ಸಾಗುವಳಿ ಜಮೀನಿನ ಮೇಲೆ ವಿಶೇಷ ಜಿಲ್ಲಾಧಿಕಾರಿಗಳು ಬೆಂಗಳೂರು

ಉತ್ತರ ತಾಲ್ಲೂಕು ಇವರ ನ್ಯಾಯಾಲಯದಲ್ಲಿ ಭೂ ಕಂದಾಯ ಕಾಯ್ದೆ ಕಲಂ ೧೩೬(೩) ಅಡಿಯಲ್ಲಿ ಪ್ರಕರಣವನ್ನು ದಾಖಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ರೈತರಿಗೆ ಸಾಗುವಳಿ ಚೀಟಿ ಹಂಚಿಕೆಯಾಗದೆ ಇರುವುದರ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೮೯ (೧೩೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ ತಾಲ್ಲೂಕು, ಜಾಲ ಹೋಬಳಿ, ಮರಳುಗುಂಟೆ ಗ್ರಾಮದ ಸರ್ವೆ ನಂ. ೫೦ರಲ್ಲಿ ಸುಮಾರು ಎಕರೆ ಸರ್ಕಾರಿ ಜಮೀನಿನಲ್ಲಿ ರೈತರು ಕಳೆದ ೧೯೬೦–೬೧ ರಿಂದ ಸಾಗುವಳಿ ಮಾಡಿಕೊಂಡು ಬರುತ್ತಿದ್ದು ಸದರಿ ರೈತರು ಫಾರಂ ೫೦ ರಲ್ಲಿ ಅರ್ಜಿ ಸಲ್ಲಿಸಲಾಗಿದ್ದು, ಸರ್ಕಾರವು ಕೆಲವೇ ರೈತರಿಗೆ ಮಾತ್ರ ಸಾಗುವಳಿ ಚೀಟಿಯನ್ನು ಹಂಚಿಕೆ ಮಾಡಿ ಇನ್ನುಳಿದ ರೈತರಿಗೆ ಸಾಗುವಳಿ ಚೀಟಿ ಹಂಚಿಕೆ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಯಾವ ಕ್ರಮ ಜರುಗಿಸಲಾಗಿದೆ? (ವಿವರ ನೀಡುವುದು)

## ಕಾರ್ಮಿಕ ಮಕ್ಕಳ ಶಿಶುಪಾಲನಾ ಕೇಂದ್ರದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೦ (೧೩೧) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರ್ಖಾನೆಗಳಲ್ಲಿ ದುಡಿಯುತ್ತಿರುವ ಮಹಿಳೆಯರ ಸುರಕ್ಷತೆ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಕಾರ್ಖಾನೆಗಳಲ್ಲಿ ಶಿಶು ಪಾಲನಾ ಕೇಂದ್ರಗಳನ್ನು ಹೊಂದಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು;

(ಇ) ಯಲಹಂಕ ಕೈಗಾರಿಕಾಭಿವೃದ್ಧಿ ಪ್ರದೇಶದಲ್ಲಿನ ಗೂ.ಗೂ ಇಂಟರ್‌ನ್ಯಾಷನಲ್ ಕಂಪನಿಯ ಮತ್ತು ಕಾಟನ್ ವರ್ಲ್ಡ್ ಕಂಪನಿಯಲ್ಲಿ ಕೆಲಸ ಮಾಡುವ ಕಾರ್ಮಿಕ ಮಕ್ಕಳನ್ನು ಶಿಶು ಪಾಲನಾ ಕೇಂದ್ರಗಳಲ್ಲಿ ಸೇರಿಸಿಕೊಳ್ಳದೆ ಮಕ್ಕಳನ್ನು ಕರೆತಂದವರನ್ನು ಕಂಪನಿಯಿಂದ ತೆಗೆದು ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಅದರ ಬಗ್ಗೆ ಕೈಗೊಂಡ ಕ್ರಮಗಳೇನು?

## ಹಂಚಿಕೆಯಾದ ಖಾಲಿ ಮನೆಗಳಲ್ಲಿ ಅಕ್ರಮ ಚಟುವಟಿಕೆ ನಡೆಯುತ್ತಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧ (೧೪೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ ತಾಲ್ಲೂಕು, ದಾಸನಪುರ ಹೋಬಳಿ, ಶಿವನಪುರ ಗ್ರಾಮದ ಸರ್ವೆ ನಂ ೭ ಮತ್ತು ೮ರಲ್ಲಿ ೨೦೦೭-೦೮ರಲ್ಲಿ ರಾಜೀವ್ ಗಾಂಧಿ ಬಡಾವಣೆ ನಿರ್ಮಾಣವಾಗಿದ್ದು, ೯೨೭ ಫಲಾನುಭವಿಗಳಿಗೆ ಮನೆ ಹಂಚಿಕೆ ಯಾಗಿದ್ದು, ಸದರಿ ಬಡಾವಣೆಯಲ್ಲಿ ಇಲ್ಲಿಯವರೆಗೆ ಸುಮಾರು ೨೦೦ ಮನೆಗಳಲ್ಲಿ ವಾಸಕ್ಕೆ ಬಂದಿದ್ದು ಉಳಿದ ಮನೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಖಾಲಿ ಇರುವ ಮನೆಗಳಲ್ಲಿ ಅಕ್ರಮ ಚಟುವಟಿಕೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು?

**ವಸತಿ ರಹಿತರಿಗೆ ಸರ್ಕಾರ ಮನೆಗಳ ನಿರ್ಮಾಣ ಮಾಡುತ್ತಿರುವ ಬಗ್ಗೆ**

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೧೨ (೧೦೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಸತಿ ರಹಿತರಿಗೆ ಸರ್ಕಾರ ಮನೆಗಳ ನಿರ್ಮಾಣ ಮಾಡುತ್ತಿರುವುದು ಹಾಗೂ ಮನೆಗಳ ನಿರ್ಮಾಣಕ್ಕೆ ಅನುದಾನ ನೀಡುತ್ತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ೨೦೦೮-೦೯ ರಿಂದ ೨೦೧೭-೧೮ ರವರೆಗೆ ಸರ್ಕಾರ ಈ ಉದ್ದೇಶಕ್ಕೆ ವಿವಿಧ ಯೋಜನೆಗಳಡಿ ಆಯವ್ಯಯದಲ್ಲಿ ನಿಗಧಿ ಮಾಡಿದ ಹಣ ಎಷ್ಟು ; ಖರ್ಚು ಮಾಡಿರುವ ಹಣ ಎಷ್ಟು ; ಇದರಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು ಎಷ್ಟು ? (ಯೋಜನಾವಾರು, ವರ್ಷಾವಾರು, ಫಲಾನುಭವಿಗಳ ಸಹಿತ ಜಿಲ್ಲಾವಾರು ಮಾಹಿತಿ ನೀಡುವುದು)

## ಸಣ್ಣ ನೀರಾವರಿ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೧೩ (೧೦೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಣ್ಣ ನೀರಾವರಿ ಇಲಾಖೆಯ ಅಡಿಯಲ್ಲಿ ಬರುವ ಯೋಜನೆಗಳು ಯಾವುವು; ಈ ಯೋಜನೆಗಳಿಗೆ ಸರ್ಕಾರ ೨೦೧೩–೧೪ ರಿಂದ ೨೦೧೭–೧೮ರವರೆಗೆ ಆಯವ್ಯಯದಲ್ಲಿ ನಿಗದಿಪಡಿಸಿದ ಹಣ ಎಷ್ಟು; ಬಿಡುಗಡೆ ಮಾಡಿದ ಹಣ ಎಷ್ಟು; ಖರ್ಚು ಮಾಡಿದ ಹಣ ಎಷ್ಟು; ಬಾಕಿ ಎಷ್ಟು; (ವಿವರವನ್ನು ವರ್ಷಾವಾರು ಯೋಜನಾವಾರು ನೀಡುವುದು)

(ಆ) 'ಕೆರೆಗಳ ಅಭಿವೃದ್ಧಿ–ನಾಡಿನ ಶ್ರೇಯೋಭಿವೃದ್ಧಿ' ಯೋಜನೆಯಡಿ ಅಭಿವೃದ್ಧಿ ಪಡಿಸಲಾಗಿರುವ ಕೆರೆಗಳ ಸಂಖ್ಯೆ ಎಷ್ಟು; ಈ ಯೋಜನೆಗೆ ೨೦೧೩–೧೪ ರಿಂದ ೨೦೧೭–೧೮ರವರೆಗೆ ಮೀಸಲಿಟ್ಟ ಹಣ ಎಷ್ಟು; ಖರ್ಚು ಮಾಡಿದ ಹಣ ಎಷ್ಟು; ಬಾಕಿ ಉಳಿದ ಹಣ ಎಷ್ಟು; ಇದುವರೆವಿಗೆ ಅಭಿವೃದ್ಧಿ ಪಡಿಸಲಾಗಿರುವ ಕೆರೆಗಳೆಷ್ಟು; (ವಿವರ ವರ್ಷಾವಾರು, ಜಿಲ್ಲಾವಾರು ಹಾಗೂ ಅಭಿವೃದ್ಧಿ ಪಡಿಸಿದ ಕೆರೆಗಳ ಸಂಪೂರ್ಣ ವಿವರ ನೀಡುವುದು)

(ಇ) ೨೦೧೩–೧೪ ರಿಂದ ೨೦೧೭–೧೮ ರವರೆಗೆ ಕೆರೆಗಳ ಹೂಳೆತ್ತಲು ಹಾಗೂ ಅಂತರ್ಜಲ ವೃದ್ಧಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಈ) 'ಸೂರ್ಯಜ್ಯೋತಿ ರೈತರ ಬಾಳಿನ ಪರಂಜ್ಯೋತಿ' ಯೋಜನೆಯಡಿ ಇದುವರೆಗೆ ಕೊರೆಸಲಾಗಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು; (ಫಲಾನುಭವಿಗಳ ಸಂಖ್ಯೆ ಸಹಿತ ವರ್ಷಾವಾರು, ಜಿಲ್ಲಾವಾರು ವಿವರ ನೀಡುವುದು)

(ಉ) ರಾಜ್ಯದಲ್ಲಿ ೨೦೧೩-೧೪ ರಿಂದ ೨೦೧೭-೧೮ರವರೆಗೆ ಎಷ್ಟು ಕೆರೆಗಳ ಒತ್ತುವರಿ ತೆರವು ಮತ್ತು ಕೆರೆಗಳ ಪೋಷಕ ಕಾಲುವೆ/ ರಾಜ ಕಾಲುವೆಗಳ ದುರಸ್ತಿ ಕಾರ್ಯವನ್ನು ಕೈಗೊಳ್ಳಲಾಗಿದೆ; ಈ ಕಾರ್ಯಕ್ಕೆ ಮೀಸಲಿಟ್ಟ ಹಣ ಎಷ್ಟು; ಖರ್ಚು ಮಾಡಿದ ಹಣ ಎಷ್ಟು; ಬಾಕಿ ಎಷ್ಟು; (ವಿವರ ನೀಡುವುದು)

## ವಸತಿ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೧೪ (೧೦೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ವಸತಿ ಯೋಜನೆಗಳಿಗೆ ಕೇಂದ್ರ ಸರ್ಕಾರ ಅನುದಾನ ಬಿಡುಗಡೆ ಮಾಡುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ೨೦೧೩-೧೪ ರಿಂದ ೨೦೧೭-೧೮ರವರೆಗೆ ರಾಜ್ಯ ಸರ್ಕಾರದಿಂದ ನಿರ್ಮಿಸಿದ ಮನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಫಲಾನುಭವಿಗಳಿಗೆ ಹಂಚಿಕೆಯಾಗಿರುವ ಮನೆಗಳು ಮತ್ತು ನಿವೇಶನಗಳ ಸಂಖ್ಯೆ ಎಷ್ಟು; ಮನೆಗಳ ಮತ್ತು ನಿವೇಶನಕ್ಕೆ ಕೋರಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು; ಬಾಕಿಯಿರುವ ಅರ್ಜಿಗಳೆಷ್ಟು; (ಜಿಲ್ಲಾವಾರು ವಿವರವನ್ನು ನೀಡುವುದು)

(ಈ) ಈ ಯೋಜನೆಗಳಿಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಪಾಲು ಎಷ್ಟು; ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಿಡುಗಡೆಯಾದ ಹಣದ ಮೊತ್ತ ಎಷ್ಟು; ಖರ್ಚಾದ ಹಣವೆಷ್ಟು; ಉಳಿಕೆ ಹಣ ಎಷ್ಟು ? (ವರ್ಷಾವಾರು ಯೋಜನೆಗಳ ಸಹಿತ ವಿವರವನ್ನು ನೀಡುವುದು)

## ಭದ್ರತಾ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೧೫ (೧೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಇಲಾಖೆಯಿಂದ ಬಡವರ ಭದ್ರತಾ ಯೋಜನೆ ಅಡಿಯಲ್ಲಿ ಪಿಂಚಣಿ ಸೌಲಭ್ಯ ನೀಡುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ಅಂತಹ ಯೋಜನೆಗಳು ಯಾವುವು; ೨೦೦೮–೦೯ ರಿಂದ ೨೦೧೭–೧೮ರವರೆಗೆ ಈ ಯೋಜನೆಗಳಿಗೆ ಸರ್ಕಾರ ಮೀಸಲಿಟ್ಟ ಹಣದ ಮೊತ್ತ ಎಷ್ಟು; ಬಾಕಿ ಇರುವ ಹಣದ ಮೊತ್ತ ಎಷ್ಟು; (ಯೋಜನೆವಾರು ಮತ್ತು ವರ್ಷಾವಾರು ವಿವರ ನೀಡುವುದು)

(ಇ) ಈ ಯೋಜನೆಗಳಿಗೆ ಕೇಂದ್ರ ಸರ್ಕಾರದ ಅನುದಾನ ಇದೆಯೇ; ಕೇಂದ್ರ ಮತ್ತು ರಾಜ್ಯ ಸರ್ಕಾರದ ಶೇಕಡವಾರು ಪಾಲು ಎಷ್ಟು? (ವರ್ಷಾವಾರು ವಿವರ ನೀಡುವುದು)

## ಅಂತ್ಯ ಸಂಸ್ಕಾರ ಪರಿಹಾರ ಭತ್ಯೆ ಕುರಿತು

**ಶ್ರೀ ಎಂ.ಕೆ. ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೬ (೧೭೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿ.ಪಿ.ಎಲ್ ಕುಟುಂಬದವರಿಗೆ ಸರ್ಕಾರದಿಂದ ನೀಡಲಾಗುವ ಅಂತ್ಯ ಸಂಸ್ಕಾರ ಪರಿಹಾರ ಭತ್ಯೆಯನ್ನು ನೀಡಲು ಇರುವ ಕಾಲಮಿತಿಯೇನು;

(ಆ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಂತ್ಯ ಸಂಸ್ಕಾರ ಪರಿಹಾರ ಭತ್ಯೆ ಕೋರಿ ಸಲ್ಲಿಸಿರುವ ಅರ್ಜಿಗಳಲ್ಲಿ ನವೆಂಬರ್–೨೦೧೫ನೇ ಇಸವಿಯಿಂದೀಚೆಗೆ ಸಲ್ಲಿಸಿರುವ ಅರ್ಜಿದಾರರಿಗೆ ಅಂತ್ಯ ಸಂಸ್ಕಾರ ಪರಿಹಾರ ಭತ್ಯೆ ದೊರಕದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಅರ್ಜಿಗಳು ಬಾಕಿ ಉಳಿಯಲು ಕಾರಣಗಳೇನು;

(ಇ) ಬಾಕಿ ಇರುವ ಅರ್ಜಿಗಳಿಗೆ ಪರಿಹಾರ ದೊರಕಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು)

## ಅನುದಾನಿತ ಐಟಿಐ ಕಾಲೇಜುಗಳ ಸಿಬ್ಬಂದಿಗಳ ವೇತನದ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೧೧೭ (೧೮೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಐಟಿಐ ತರಬೇತಿ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ ಬೋಧಕೇತರರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಸದರಿ ನೌಕರರಿಗೆ ಪ್ರತಿ ತಿಂಗಳು ವೇತನ ನೀಡದಿರಲು ಕಾರಣಗಳೇನು; ಈ ನೌಕರರ ವೇತನಕ್ಕೆ ಬೇಕಾಗಿರುವ ಮಾಸಿಕ ವೆಚ್ಚವೆಷ್ಟು; (ವಿವರ ನೀಡುವುದು)

(ಇ) ಸದರಿ ನೌಕರರಿಗೆ ಪ್ರತಿ ತಿಂಗಳು ವೇತನ ನೀಡಲು ಯಾವ ಕ್ರಮ ಕೈಗೊಳ್ಳಲಾಗುವುದು;

(ಈ) ಈ ನೌಕರರಿಗೆ ಹೆಚ್.ಆರ್.ಎಂ.ಎಸ್. ಮೂಲಕ ನೇರವಾಗಿ ನೌಕರರ ಖಾತೆಗೆ ವೇತನ ನೀಡಲು ಇರುವ ಸಮಸ್ಯೆಗಳೇನು;

(ಉ) ಯಾವ ಕಾಲಮಿತಿಯಲ್ಲಿ ಸದರಿ ನೌಕರರಿಗೆ ಹೆಚ್.ಆರ್.ಎಂ.ಎಸ್. ಮೂಲಕ ಪ್ರತಿ ತಿಂಗಳು ವೇತನ ಪಾವತಿಸಲು ಕ್ರಮ ಕೈಗೊಳ್ಳಲಾಗುತ್ತದೆ? (ವಿವರ ನೀಡುವುದು)

## ನಿರ್ಮಿತಿ ಕೇಂದ್ರದ ವತಿಯಿಂದ ಕೈಗೊಂಡ ಕಾಮಗಾರಿ

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೧೮ (೧೪೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ನಿರ್ಮಿತಿ ಕೇಂದ್ರದ ವತಿಯಿಂದ ಕೈಗೊಂಡ ಕಾಮಗಾರಿಗಳು ಯಾವುವು; (ವರ್ಷಾವಾರು, ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಈ ಕಾಮಗಾರಿಗಳಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಅನುದಾನವನ್ನು ಯಾವ ಲೆಕ್ಕ ಶೀರ್ಷಿಕೆಯ ಅಡಿಯಲ್ಲಿ ಬಳಸಲಾಗಿದೆ; (ಕಾಮಗಾರಿಗಳವಾರು ಹಾಗೂ ಪೂರ್ಣಗೊಂಡ ಕಾಮಗಾರಿಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಹಾಗೆ ನಿರ್ವಹಿಸಿರುವ ಕಾಮಗಾರಿಗಳ ಅಂದಾಜು ಪಟ್ಟಿ ಮತ್ತು ನಕ್ಷೆ (ಮ್ಯಾಪ್) ಕಾಮಗಾರಿ ಕೈಗೊಂಡಿರುವ ಸ್ಥಳಗಳೊಂದಿಗೆ ಸ್ಪಷ್ಟ ವಿವರ ಒದಗಿಸುವುದು;

(ಈ) ನಿರ್ಮಿತಿ ಕೇಂದ್ರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳ ಸ್ಪಷ್ಟ ವಿವರ ಮತ್ತು ಹೆಸರು ಪದನಾಮದೊಂದಿಗೆ ಮಾಹಿತಿ ಒದಗಿಸುವುದು?

## ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯ ಅಭಿವೃದ್ಧಿ ಕಾಮಗಾರಿಗಳು

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೧೯ (೧೫೧) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿಗೆ ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆ ಹಮ್ಮಿಕೊಂಡಿರುವ ಅಭಿವೃದ್ಧಿ ಯೋಜನೆಗಳು ಯಾವುವು; ಇದರ ಒಟ್ಟು ಮೊತ್ತ ಎಷ್ಟು; (ವಿವರ ಒದಗಿಸುವುದು)

(ಆ) ಪ್ರಗತಿಯ ಹಾಗೂ ಮೊತ್ತದ ಕುರಿತು ವಿಧಾನ ಸಭೆ ಕ್ಷೇತ್ರವಾರು ವಿವರ ನೀಡುವುದು;

(ಇ) ಅಭಿವೃದ್ಧಿ ಕಾಮಗಾರಿಗಳು ಯಾವ ಹಂತದಲ್ಲಿವೆ; ಸದರಿ ಕಾಮಗಾರಿಗಳು ಮುಕ್ತಾಯಗೊಳ್ಳಲಿರುವುದು ಯಾವಾಗ;

(ಈ) ಕಾಮಗಾರಿಗಳ ಗುಣಮಟ್ಟವನ್ನು ಮೂರನೇ ಪಾರ್ಟಿ ವೀಕ್ಷಣೆ ಮಾಡಿಸಲಾಗಿದೆಯೇ; ಆಗಿದ್ದರೆ, ಅದರ ಸ್ಪಷ್ಟ ಮಾಹಿತಿ ನೀಡುವುದು;

(ಉ) ಗುಣಮಟ್ಟದ ಕಾಮಗಾರಿಗೆ ಯಾವ ಮಾದರಿಯ ಕ್ರಮ ಕೈಗೊಳ್ಳಲಾಗಿದೆ; ಗುತ್ತಿಗೆ ನೀಡುವ ಕಾರ್ಯದಲ್ಲಿ ಯಾವ ಮಾನದಂಡ ಅನುಸರಿಸಲಾಗಿದೆ;

(ಊ) ಗುತ್ತಿಗೆದಾರರು ಕಾಲಮಿತಿಯೊಳಗೆ ಕೆಲಸ ಪೂರೈಸದಿದ್ದರೆ ಅಥವಾ ಕಳಪೆ ಕಾಮಗಾರಿ ಆಗಿದ್ದರೆ ಅಂತಹವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮ ಏನು ? (ಸಂಪೂರ್ಣ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಗೆ ಸರ್ಕಾರದಿಂದ ಎಸ್.ಸಿ/ಎಸ್.ಟಿ ಯವರಿಗೆ ನೀಡುವ ಸೌಲಭ್ಯಗಳ ಬಗ್ಗೆ

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೨೦ (೧೫೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಗೆ ಸಣ್ಣ ನೀರಾವರಿ ಯೋಜನೆಯಲ್ಲಿ ಸರ್ಕಾರದಿಂದ ಎಸ್.ಸಿ/ಎಸ್.ಟಿ. ಮತ್ತು ಸಣ್ಣ ಹಿಡುವಳಿದಾರ ರೈತ ಕುಟುಂಬಗಳಿಗೆ ಕೊಳವೆ ಬಾವಿ ಕೊರೆಸುವ ಯೋಜನೆ ಇದೆಯೇ; ಇದ್ದರೆ, ಜಿಲ್ಲೆಯಲ್ಲಿ ಕೊರೆದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು; ಕಳೆದ ೨೦೧೬ ರಿಂದ ಜನವರಿ ೩೧–೦೧–೧೮ರ ಸಾಲಿನ ವರೆಗೆ ತಾಲ್ಲೂಕುವಾರು ಮಾಹಿತಿ ನೀಡುವುದು;

(ಆ) ಬೀದರ್ ಜಿಲ್ಲೆಂಯುಲ್ಲಿ ಸಣ್ಣ ನೀರಾವರಿ ಇಲಾಖೆಂಯು ಯೋಜನೆಯಡಿಯಲ್ಲಿ ಕೊಳವೆ ಬಾವಿ ಕೊರೆಯಿಸಲು ಬಂದ ಅರ್ಜಿಗಳೆಷ್ಟು ; ಅವುಗಳಲ್ಲಿ ಆಯ್ಕೆಯಾದ ಫಲಾನುಭವಿಗಳೆಷ್ಟು; ಮತ್ತು ತಿರಸ್ಕರಿಸಿದ ಅರ್ಜಿಗಳೆಷ್ಟು ; (೨೦೧೬ ರಿಂದ ಜನವರಿ ಅಂತ್ಯಕ್ಕೆ ತಾಲ್ಲೂಕುವಾರು ರೈತರ ಸಂಪೂರ್ಣ ಮಾಹಿತಿ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಕೊಳವೆ ಬಾವಿಯನ್ನು ಕೊರೆಸಲು ಬಂದ ಅನುದಾನ ಎಷ್ಟು; ಆ ಪೈಕಿ ಖರ್ಚಾದ ಅನುದಾನ ಎಷ್ಟು; ಬಾಕಿ ಉಳಿದ ಅನುದಾನ ಎಷ್ಟು; ಬಾಕಿ ಉಳಿಯಲು ಕಾರಣವೇನು; (೨೦೧೬ ರಿಂದ ೨೦೧೮ ನೇ ಸಾಲಿನ ವರೆಗೆ ಸಂಪೂರ್ಣ ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಈ) ಹಾಗಿದ್ದಲ್ಲಿ, ಒಂದು ಕೊಳವೆ ಬಾವಿಯನ್ನು ಕೊರೆಸಲು ಅದಕ್ಕೆ ತಗಲುವ ವೆಚ್ಚ ಎಷ್ಟು; (ಕೊಳವೆ ಬಾವಿ, ಪಂಪಸೆಟ್ ವಿದ್ಯುತ್ ಇತರ ಸಂಪರ್ಕ ಒಳಗೊಂಡಂತೆ ಅದರ ಸಂಪೂರ್ಣ ಮಾಹಿತಿ ನೀಡುವುದು)

## ವಾಜಪೇಯಿ ವಸತಿ ಯೋಜನೆ ಹಕ್ಕು ಪತ್ರ ವಿತರಣೆ ಬಗ್ಗೆ

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೨೧ (೧೪೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ನಗರದಲ್ಲಿ ವಸತಿ ರಹಿತ ಕುಟುಂಬಗಳನ್ನು ಗುರುತಿಸುವ ಕಾರ್ಯ ಮುಕ್ತಾಯವಾಗಿದೆಯೇ; ಮುಗಿದಿದ್ದಲ್ಲಿ, ಬೇರೆ ಬೇರೆ ಯೋಜನೆಯಲ್ಲಿ ೨೦೧೦ ರಿಂದ ಇಲ್ಲಿಯವರೆಗೆ ಯೋಜನೆವಾರು ಗುರಿ ಎಷ್ಟು; (ಯೋಜನೆವಾರು, ವರ್ಷಾವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಯೋಜನೆಯಡಿಯಲ್ಲಿ ಬೀದರ್ ನಗರದಲ್ಲಿ ಕಳೆದ ೨೦೧೦ ರಿಂದ ಈವರೆಗೆ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು; ಆ ಪೈಕಿ ಎಷ್ಟು ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಲಾಗಿದೆ; (ವರ್ಷಾವಾರು, ಫಲಾನುಭವಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ವಸತಿ ಯೋಜನೆಯನ್ನು ಫಲಾನುಭವಿಗಳಿಗೆ ತಲುಪಿಸಲು ಯಾರಿಗೆ ಜವಾಬ್ದಾರಿಯನ್ನು ನೀಡಲಾಗಿದೆ; ಇವರು ಕೈಗೊಂಡ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಈ) ಈ ಯೋಜನೆಯನ್ನು ಫಲಾನುಭವಿಗಳಿಗೆ ಸರಿಯಾದ ಸಮಯದಲ್ಲಿ ತಲುಪಿಸದೇ ಇದ್ದಲ್ಲಿ ಅಂತಹ ಜವಾಬ್ದಾರಿ ಪಡೆದ ಅಧಿಕಾರಿ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)

## ಅಭಿವೃದ್ಧಿ ಕಾಮಗಾರಿಗಳು

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೨೨ (೧೫೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೆ ಸಾಲಿಗೆ ಬೀದರ್ ಜಿಲ್ಲೆ ವ್ಯಾಪ್ತಿಯಲ್ಲಿ ಅರಣ್ಯ ಇಲಾಖೆ ಹಮ್ಮಿಕೊಂಡಿರುವ ಅಭಿವೃದ್ಧಿ ಯೋಜನೆಗಳು ಯಾವುವು; ಇದರ ಒಟ್ಟು ಮೊತ್ತ ಎಷ್ಟು; (ವಿವರ ಒದಗಿಸುವುದು)

(ಆ) ಜಿಲ್ಲೆಯಲ್ಲಿ ಇಲಾಖೆ ಹಮ್ಮಿಕೊಂಡಿರುವ ಅಭಿವೃದ್ಧಿ ಕಾಮಗಾರಿಗಳಾವುವು; ಸದರಿ ಕಾಮಗಾರಿಗಳ ಪ್ರಗತಿಯು ಯಾವ ಹಂತದಲ್ಲಿದೆ; ಇದಕ್ಕೆ ಖರ್ಚಾದ ಮೊತ್ತ ಎಷ್ಟು; (ವಿಧಾನ ಸಭೆ ಕ್ಷೇತ್ರವಾರು ಕಾಮಗಾರಿವಾರು ವಿವರ ನೀಡುವುದು)

(ಇ) ಇರುವ ಕಾಮಗಾರಿಗಳು ಯಾವ ಕಾಲಮಿತಿಯೊಳಗೆ ಮುಕ್ತಾಯಗೊಳ್ಳಲಿದೆ;

(ಈ) ಕಾಮಗಾರಿಗಳ ಗುಣಮಟ್ಟವನ್ನು ಮೂರನೇ ಪಾರ್ಟಿ ವೀಕ್ಷಣೆ ಮಾಡಿಸಲಾಗಿದೆಯೇ; ಆಗಿದ್ದರೆ, ಅದರ ಮಾಹಿತಿಯನ್ನು ಸಂಪೂರ್ಣವಾಗಿ ನೀಡುವುದು:

(ಉ) ಗುಣಮಟ್ಟದ ಕಾಮಗಾರಿಗೆ ಯಾವ ಮಾದರಿಯ ಕ್ರಮಕೈಗೊಳ್ಳಲಾಗಿದೆ; ಗುತ್ತಿಗೆ ನೀಡುವ ಕಾರ್ಯದಲ್ಲಿ ಯಾವ ಮಾನದಂಡ ಅನುಸರಿಸಲಾಗಿದೆ;

(ಊ) ಗುತ್ತಿಗೆದಾರರು ಸಮಯಕ್ಕೆ ಸರಿಯಾಗಿ ಕೆಲಸ ಪೂರೈಸದಿದ್ದರೆ ಅಥವಾ ಕಳಪೆ ಕಾಮಗಾರಿ ಆಗಿದ್ದರೆ ಅಂತಹವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮ ಏನು? (ವಿವರ ನೀಡುವುದು)

## ವಕೀಲರ ಮಾಹಿತಿ ಕೋರಿ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :-**

೧೨೩ (೧೦೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದಲ್ಲಿ ಎಷ್ಟು ಮಂದಿ ವಕೀಲರು ನೋಂದಾವಣೆ ಮೂಲಕ ವಕೀಲ ವೃತ್ತಿಯನ್ನು ಮಾಡುತ್ತಿದ್ದಾರೆ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ರಾಜ್ಯ ಸರ್ಕಾರವು ಯಾವ ಯಾವ ವರ್ಗದ ವಕೀಲರಿಗೆ ಎಷ್ಟು ವರ್ಷ ಹಾಗೂ ಎಷ್ಟು ಮೊತ್ತದ ಶಿಷ್ಯವೇತನವನ್ನು (ಸ್ಟೈಪಂಡ್) ನೀಡುತ್ತಿದೆ; ಸಾಮಾನ್ಯ ವರ್ಗದ ವಕೀಲರಿಗೆ ರಾಜ್ಯ ಸರ್ಕಾರ ಸ್ಟೈಪಂಡ್ ನೀಡುತ್ತಿದೆಯೇ; ನೀಡದೇ ಇದ್ದಲ್ಲಿ ಯಾವ ದಿನಾಂಕದಿಂದ ನೀಡಲಾಗುವುದು;

(ಇ) ರಾಜ್ಯದಲ್ಲಿ ಇರುವ ಮಹಿಳಾ ವಕೀಲರ ಸಂಖ್ಯೆ ಎಷ್ಟು; ಮಹಿಳಾ ವಕೀಲರ ಆರ್ಥಿಕ ಸಬಲೀಕರಣಕ್ಕೆ ರಾಜ್ಯ ಸರ್ಕಾರ ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ; ವೃತ್ತಿ ಪೂರ್ವದಲ್ಲಿ ಇವರಿಗೆ ನೀಡುವ ಸ್ಟೈಪಂಡ್ ಮೊತ್ತವನ್ನು ದ್ವಿಗುಣಗೊಳಿಸಲಾಗುವುದೇ;

(ಈ) ವಕೀಲ ವೃತ್ತಿಗೆ ಬರುವ ಯಾವ ವಕೀಲರಿಗೆ ತಮ್ಮ ವೃತ್ತಿ ಕಛೇರಿಯುನ್ನು ತೆರೆಯುಲು ಆರ್ಥಿಕ ಸೌಲಭ್ಯವನ್ನು ಒದಗಿಸಿಕೊಡಲು ರಾಜ್ಯ ಸರ್ಕಾರ ಕ್ರಮ ಕೈಗೊಳ್ಳುವುದೇ; ರಾಜ್ಯದಲ್ಲಿರುವ ಎಷ್ಟು ವಕೀಲರ ಸಂಘಗಳಿಗೆ ರಾಜ್ಯ ಸರ್ಕಾರವು ಕಾರ್ಯಾಲಯಗಳನ್ನು ಒದಗಿಸಿಕೊಟ್ಟಿದೆ; ಇಲ್ಲದೇ ಇದ್ದ ಪಕ್ಷದಲ್ಲಿ ಅಂತಹ ವಕೀಲ ಸಂಘಗಳ ಸಂಖ್ಯೆ ಎಷ್ಟು? (ವಿವರವಾದ ಮಾಹಿತಿಯನ್ನು ನೀಡುವುದು)

## ವಿಶ್ವೇಶ್ವರಯ್ಯ ನೀರಾವರಿ ನಿಗಮ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೧೨೪ (೧೦೧) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ವಿಶ್ವೇಶ್ವರಯ್ಯ ನೀರಾವರಿ ನಿಗಮವು ಎಂದಿನಿಂದ ಕಾರ್ಯ ನಿರ್ವಹಿಸುತ್ತಿದೆ, ಇದಕ್ಕೆ ಮಂಜೂರಾಗಿರುವ ಇಂಜಿನಿಯರ್‌ಗಳ ಹುದ್ದೆಗಳೆಷ್ಟು; ಈ ನಿಗಮದಲ್ಲಿ ಖಾಲಿಯಿರುವ ಇಂಜಿನಿಯರಿಂಗ್ ಹುದ್ದೆಗಳೆಷ್ಟು; ಎರವಲು ಸೇವೆಯ ಮೇಲೆ ಈ ನಿಗಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಇಂಜಿನಿಯರ್‌ಗಳ ಸಂಖ್ಯೆ ಎಷ್ಟು;

(ಆ) ವಿಶ್ವೇಶ್ವರಯ್ಯ ನೀರಾವರಿ ನಿಗಮದ ಕಾರ್ಯವ್ಯಾಪ್ತಿಗೆ ಒಳಪಡುವ ಜಿಲ್ಲೆಗಳೆಷ್ಟು; ಸದರಿ ನಿಗಮದಲ್ಲಿ ಹಾಲಿ ಕೈಗೊಂಡಿರುವ ಯೋಜನೆಗಳು ಯಾವುವು ಮತ್ತು ಸದರಿ ಯೋಜನೆಗಳಿಗೆ ಮಂಜೂರಾಗಿರುವ ಹಣವೆಷ್ಟು; ಹಾಗೂ ಬಿಡುಗಡೆಯಾಗಿರುವ ಹಣವೆಷ್ಟು; (ವಿವರವಾದ ಮಾಹಿತಿಯನ್ನು ನೀಡುವುದು)

(ಇ) ವಿಶ್ವೇಶ್ವರಯ್ಯ ನೀರಾವರಿ ನಿಗಮದ ವ್ಯಾಪ್ತಿಯಲ್ಲಿ ತುಮಕೂರು ಜಿಲ್ಲೆಯ ಕೊರಟಗೆರೆಯ ಬೈರಗೊಂಡ್ಲು ಜಲಾಶಯ ನಿರ್ಮಾಣದ ಮೂಲ ಅಂದಾಜು ಮೊತ್ತ ಎಷ್ಟು; ಪರಿಷ್ಕೃತ ಅಂದಾಜು ಮೊತ್ತ ಎಷ್ಟು; ಮಂಜೂರು ಮಾಡಲಾಗಿರುವ ಹಣವೆಷ್ಟು; ಇಲ್ಲಿಯವರೆಗೆ ಕೈಗೊಳ್ಳಲಾಗಿರುವ ಕಾಮಗಾರಿಗಳಾವುವು;

(ಈ) ವಿಶ್ವೇಶ್ವರಯ್ಯ ನೀರಾವರಿ ನಿಗಮದ ಮೂಲಕ ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ಕುಡಿಯುವ ನೀರಿನ ಯೋಜನೆಯನ್ನು ಕೈಗೊಳ್ಳಲಾಗಿದೆ; ಇವುಗಳಿಗೆ ಮಂಜೂರಾಗಿರುವ ಅನುದಾನ ಎಷ್ಟು; ಇಲ್ಲಿಯವರೆಗೆ ಎಷ್ಟು ಟೆಂಡರ್‌ಗಳನ್ನು ಕರೆಯಲಾಗಿದೆ; ಮತ್ತು ಆರಂಭಿಸಲಾಗಿರುವ ಕಾಮಗಾರಿಗಳ ಸಂಖ್ಯೆ ಎಷ್ಟು?

## ಕರ್ನಾಟಕ ಗೃಹ ಮಂಡಳಿಯಲ್ಲಿರುವ ಖಾಲಿ ಹುದ್ದೆ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೧೨೫ (೧೦೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಗೃಹ ಮಂಡಳಿಯಲ್ಲಿ ಮಂಜೂರಾಗಿರುವ ಇಂಜಿನಿಯರ್‌ಗಳ ಹುದ್ದೆಗಳೆಷ್ಟು; ಇವುಗಳಲ್ಲಿ ಖಾಲಿ ಇರುವ

ಹುದ್ದೆಗಳೆಷ್ಟು; ಎರವಲು ಸೇವೆಯ ಆಧಾರದ ಮೇಲೆ ಎಷ್ಟು ಜನ ಇಂಜಿನಿಯರ್‌ಗಳು ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ ; (ಹೆಸರು ಸಹಿತವಾಗಿ ವಿವರವಾದ ಮಾಹಿತಿ ನೀಡುವುದು)

(ಆ) ಕರ್ನಾಟಕ ಗೃಹ ಮಂಡಳಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಷ್ಟು ಅಧಿಕಾರಿಗಳ ಮೇಲೆ ಹಣ ದುರುಪಯೋಗದ ದೂರುಗಳು ಬಂದಿರುತ್ತವೆ ; ಎಷ್ಟು ದೂರುಗಳ ಮೇಲೆ ಇಲ್ಲಿಯವರೆಗೆ ಕ್ರಮ ವಹಿಸಲಾಗಿದೆ ; ಎರವಲು ಸೇವೆಯ ಮೇಲೆ ಯಾವ ಯಾವ ಸಿಬ್ಬಂದಿ ಕರ್ನಾಟಕ ಗೃಹ ಮಂಡಳಿಯಲ್ಲಿ ಕೆಲಸ ಮಾಡುತ್ತಿದ್ದಾರೆ ;

(ಇ) ಕರ್ನಾಟಕ ಗೃಹ ಮಂಡಳಿಯು ಬೆಂಗಳೂರು ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯನ್ನು ಹೊರತುಪಡಿಸಿ, ರಾಜ್ಯದ ಎಷ್ಟು ಸ್ಥಳಗಳಲ್ಲಿ ಖಾಸಗಿಯವರೊಂದಿಗೆ ನಿವೇಶನ ಅಭಿವೃದ್ಧಿಯ ಯೋಜನೆಗಳನ್ನು ಹೊಂದಿರುತ್ತದೆ ; ಇವುಗಳ ಒಟ್ಟು ಮೊತ್ತ ಎಷ್ಟು ; ಮತ್ತು ಪೂರ್ಣಗೊಂಡಿರುವ ಯೋಜನೆಗಳೆಷ್ಟು ; ಬಾಕಿಯಿರುವ ಯೋಜನೆಗಳೆಷ್ಟು ; (ವಿವರವಾದ ಮಾಹಿತಿಗಳನ್ನು ಒದಗಿಸುವುದು)

(ಈ) ಕರ್ನಾಟಕ ಗೃಹ ಮಂಡಳಿಯು ಕಳೆದ ಐದು ವರ್ಷಗಳಲ್ಲಿ ಕರ್ನಾಟಕದಲ್ಲಿ ಸಿ.ಎ. ನಿವೇಶನಗಳ ಹಂಚಿಕೆಗೆ ಎಷ್ಟು ಬಾರಿ ಅರ್ಜಿಗಳನ್ನು ಕರೆದಿರುತ್ತದೆ ; ಕಳೆದ ಐದು ವರ್ಷಗಳಿಂದ ಇಲ್ಲಿಯವರಿಗೆ ಎಷ್ಟು ಸಂಘ ಸಂಸ್ಥೆಗಳಿಗೆ ಸಿ.ಎ. ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ? (ವಿವರವಾದ ಮಾಹಿತಿಗಳನ್ನು ಒದಗಿಸುವುದು)

## ಐ.ಟಿ.ಐ. ಕಾಲೇಜುಗಳ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೧೨೬ (೧೦೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಇರುವ ಸರ್ಕಾರಿ / ಅರೆ ಸರ್ಕಾರಿ / ಖಾಸಗಿ ಐ.ಟಿ.ಐ. ಕಾಲೇಜುಗಳ ಸಂಖ್ಯೆ ಎಷ್ಟು; ಪ್ರತಿ ವರ್ಷ ಐ.ಟಿ.ಐ. ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಇವರ ಶೇಕಡಾವಾರು ಫಲಿತಾಂಶ ಎಷ್ಟು; ಐ.ಟಿ.ಐ. ಅಡಿಯಲ್ಲಿ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಕೋರ್ಸ್‌ಗಳು ಯಾವುವು ;

(ಆ) ಸರ್ಕಾರದ ಐ.ಟಿ.ಐ. ಕಾಲೇಜುಗಳಲ್ಲಿ ಮಂಜೂರಾಗಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಖಾಲಿಯಿರುವ ಹುದ್ದೆಗಳೆಷ್ಟು; ರಾಜ್ಯದಲ್ಲಿ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರದ ಐ.ಟಿ.ಐ. ಕಾಲೇಜುಗಳೆಷ್ಟು ಮತ್ತು ಬಾಡಿಗೆ ಕಟ್ಟಡದಲ್ಲಿರುವ ಕಾಲೇಜುಗಳೆಷ್ಟು ;

(ಇ) ರಾಜ್ಯ ಸರ್ಕಾರವು ಖಾಲಿಯಿರುವ ಐ.ಟಿ.ಐ.ನ ಬೋಧಕ ಸಿಬ್ಬಂದಿಗಳನ್ನು ತುಂಬಲು ಕೈಗೊಂಡಿರುವ ಕ್ರಮಗಳೇನು ; ಐ.ಟಿ.ಐ. ಕಾಲೇಜುಗಳಲ್ಲಿ ಪೂರ್ಣ ಪ್ರಮಾಣದ ಪ್ರಾಂಶುಪಾಲರ ಹುದ್ದೆಯನ್ನು ತುಂಬಲಾಗಿದೆಯೇ ; ತುಂಬದೇ ಇದ್ದಲ್ಲಿ ಕಾರಣವೇನು ;

(ಈ) ಐ.ಟಿ.ಐ. ಕಾಲೇಜುಗಳಲ್ಲಿ ಪದೋನ್ನತಿ ಹೊಂದಬೇಕಾಗಿರುವ ಬೋಧಕ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಹಾಲಿ ಕಾರ್ಯನಿರ್ವಹಿಸುತ್ತಿರುವ

ಬೋಧಕ ಸಿಬ್ಬಂದಿಗೆ ಸೇವಾ ಹಿರಿತನಕ್ಕೆ ಅನುಗುಣವಾಗಿ ಪದೋನ್ನತಿ ನೀಡಲು ಮತ್ತು ಖಾಲಿಯಿರುವ ಹುದ್ದೆಗಳನ್ನು ತುಂಬಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪೋಡಿಗಾಗಿ ಬಾಕಿ ಇರುವ ಅರ್ಜಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೭ (೧೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪೋಡಿಗಾಗಿ ಬಾಕಿ ಇರುವ ಅರ್ಜಿಗಳೆಷ್ಟು ; (ಜಿಲ್ಲಾವಾರು ವಿವರ ಹಾಗೂ ಹಾವೇರಿ ಜಿಲ್ಲೆಯ ತಾಲ್ಲೂಕುವಾರು ಪ್ರತ್ಯೇಕ ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಿಂದ ಸಲ್ಲಿಕೆಯಾಗಿರುವ ಅರ್ಜಿಗಳೆಷ್ಟು ; ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ; (ಜಿಲ್ಲಾವಾರು ವಿವರ ಹಾಗೂ ಹಾವೇರಿ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಇ) ಪೋಡಿಗಾಗಿ ಸಲ್ಲಿಕೆಯಾಗುವ ಅರ್ಜಿಗಳನ್ನು ಇತ್ಯರ್ಥಪಡಿಸಲು ಕಾಲಮಿತಿ ಇದೆಯೇ ; ಕಾಲಮಿತಿಯೊಳಗೆ ಅರ್ಜಿಗಳನ್ನು ವಿಲೇವಾರಿ ಮಾಡಿದ ಎಷ್ಟು ಜನ ಅಧಿಕಾರಿಗಳ ವಿರುದ್ಧ ಸಿ.ಸಿ.ಎ. ನಿಯಮಾವಳಿ ಅನ್ವಯ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಪೋಡಿಗಾಗಿ ಬಾಕಿ ಇರುವ ಅರ್ಜಿಗಳನ್ನು ತ್ವರಿತಗತಿಯಲ್ಲಿ ವಿಲೇವಾರಿ ಮಾಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ೨೦೧೩-೧೪ ರಿಂದ ೨೦೧೭-೧೮ರ ವರೆಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ಮಂಜೂರಾದ ಮನೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):-**

೧೨೮ (೧೭೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೩-೧೪ ರಿಂದ ೨೦೧೭-೧೮ ನೇ ಸಾಲಿನವರೆಗೆ ಹಾವೇರಿ ಜಿಲ್ಲೆಯಲ್ಲಿ ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ವಿವಿಧ ಯೋಜನೆಗಳಡಿಯಲ್ಲಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು; ಪೂರ್ಣಗೊಂಡ ಮನೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವರ್ಷಾವಾರು ಯೋಜನೆವಾರು ವಿವರ ನೀಡುವುದು)

(ಆ) ಶಿಗ್ಗಾಂವ ಸವಣೂರು ಮತಕ್ಷೇತ್ರದಲ್ಲಿ ೨೦೧೩-೧೪ ರಿಂದ ೨೦೧೭-೧೮ರ ವರೆಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ಯಾವ ಯಾವ ಯೋಜನೆಗಳಡಿಯಲ್ಲಿ ಎಷ್ಟು ಮನೆಗಳು ಪೂರ್ಣಗೊಂಡಿವೆ ; ಸದರಿ ಯೋಜನೆಗಳ ಅಡಿಯಲ್ಲಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು; ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ವಿತರಿಸಲಾಗಿದೆ ? (ಯೋಜನಾವಾರು, ಗ್ರಾಮವಾರು, ಸಂಖ್ಯೆವಾರು, ವರ್ಷವಾರು ವಿವರ ನೀಡುವುದು)

## ರಾಜ್ಯದಲ್ಲಿರುವ ಮೃಗಾಲಯಗಳ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ):-**

೧೨೯ (೧೬೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಮೃಗಾಲಯಗಳಿವೆ ;

(ಆ) ಈ ಮೃಗಾಲಯಗಳನ್ನು ಯಾವ ರೀತಿ ವಿಂಗಡಣೆ ಮಾಡಲಾಗಿದೆ ;

(ಇ) ವಿವಿಧ ರೀತಿಯ ಮೃಗಾಲಯಗಳು ಯಾವ ಜಿಲ್ಲೆ ಹಾಗೂ ಯಾವ ಸ್ಥಳಗಳಲ್ಲಿ ಇರುವುವು ; (ಜಿಲ್ಲಾವಾರು ಪಟ್ಟಿ ನೀಡುವುದು)

(ಈ) ಪ್ರತಿ ಮೃಗಾಲಯಕ್ಕೆ ಪ್ರತಿ ವರ್ಷ ಬಿಡುಗಡೆ ಮಾಡುವ (ಸಿಬ್ಬಂದಿ ವೇತನ ಸಮೇತ) ಅನುದಾನ ಎಷ್ಟು ; ಕಳೆದ ಮೂರು ವರ್ಷಗಳ ಮಾಹಿತಿ ನೀಡುವುದು)

(ಉ) ರಾಜ್ಯದ ಪ್ರತಿ ಮೃಗಾಲಯದ ಆದಾಯ ಹಾಗೂ ಖರ್ಚಿನ ಬಗ್ಗೆ ವಿವರವಾದ ಮಾಹಿತಿ ಒದಗಿಸುವುದು ;

(ಊ) ರಾಜ್ಯದ ಮೃಗಾಲಯಗಳಿಗೆ "ಸೆಂಟ್ರಲ್ ಝೂ ಅಥಾರಿಟಿ ನವದೆಹಲಿ" ಇವರು ಗ್ರೇಡ್ ನೀಡಿ ಮಾನ್ಯತೆ ನೀಡಲಾಗಿದೆಯೇ ; ಹಾಗಿದ್ದಲ್ಲಿ, ಅದರ ಕುರಿತು ವಿವರಣೆ ನೀಡುವುದು ;

(ಋ) ಖಾಸಗಿ ಸಂಸ್ಥೆಗಳಿಂದ ಹಾಗೂ ದಾನಿಗಳಿಂದ ಹಣ ಸ್ವೀಕರಿಸಿ ಮೃಗಾಲಯಗಳನ್ನು ಅಭಿವೃದ್ಧಿ ಪಡಿಸುವಂತಹ ಯೋಜನೆಗಳನ್ನು ಸರ್ಕಾರ ರೂಪಿಸಿದೆಯೇ ; ಹಾಗಿದ್ದಲ್ಲಿ ವಿವರ ನೀಡುವುದು ;

(ಎ) ರಾಜ್ಯದಲ್ಲಿ ಹೊಸ ಮೃಗಾಲಯಗಳನ್ನು ಆರಂಭಿಸಲು ಸರ್ಕಾರ ಚಿಂತನೆ ನಡೆಸಿರುವುದೇ ; ಹಾಗಿದ್ದಲ್ಲಿ, ವಿವರ ನೀಡುವುದು ?

## ಬರ ಪರಿಹಾರಕ್ಕಾಗಿ ಕೇಂದ್ರ ಸರ್ಕಾರ ನೀಡಿದ ಅನುದಾನ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೩೦ (೧೭೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೊಸ ಸರ್ಕಾರ ರಚನೆಯಾದ ಮೇಲೆ ನಮ್ಮ ರಾಜ್ಯಕ್ಕೆ ೨೦೧೪ ಮೇ ನಂತರ ಕೇಂದ್ರ ಸರ್ಕಾರದಿಂದ ಬರಪರಿಹಾರಕ್ಕಾಗಿ ಮಂಜೂರಾದ ವರ್ಷವಾರು ಅನುದಾನ ಎಷ್ಟು; ವಿವರ ನೀಡುವುದು ;

(ಆ) ಮೆ, ೨೦೧೪ರ ನಂತರ ರಾಜ್ಯಕ್ಕೆ ನೆರೆ ಪರಿಹಾರಕ್ಕೆ ಬಿಡುಗಡೆಯಾದ ಅನುದಾನ ಎಷ್ಟು: ಹಾಗೂ ಆ ಪೈಕಿ ಬಳಕೆಯಾದ ಅನುದಾನ ಎಷ್ಟು; ಮತ್ತು ಬಾಕಿ ಉಳಿದಿರುವ ಅನುದಾನ ಎಷ್ಟು; (ಮಾಹಿತಿ ನೀಡುವುದು)

(ಇ) ಬರ ಪರಿಹಾರ ಹಾಗೂ ನೆರೆ ಪರಿಹಾರವನ್ನು ಯಾವ ಮಾನದಂಡದಲ್ಲಿ ವಿತರಿಸಲಾಗಿದೆ? (ಬಳಕೆಯ ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಸರ್ಕಾರಿ ಜಾಗಗಳಲ್ಲಿ ಕಟ್ಟಿಕೊಂಡಿರುವ ಮನೆಗಳ ಸಕ್ರಮಾತಿ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೧ (೧೩೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರಿ ಜಾಗಗಳಲ್ಲಿ ಅಕ್ರಮವಾಗಿ ಮನೆ ಕಟ್ಟಿಕೊಂಡಿರುವವರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅಕ್ರಮವಾಗಿ ಸರ್ಕಾರಿ ಜಾಗಗಳಲ್ಲಿ ಮನೆ ಕಟ್ಟಿಕೊಂಡವರು ಕಂದಾಯಕ್ಕೆ ಒಳಪಡದವರಿಗೆ ಸಕ್ರಮ ಮಾಡಲು ಅರ್ಜಿ ಸಲ್ಲಿಸಲು ಅವಕಾಶ ಇದೆಯೇ ;

(ಇ) ಇಲ್ಲವೆಂದಾದಲ್ಲಿ ಅಕ್ರಮವಾಗಿ ಸರ್ಕಾರಿ ಜಾಗಗಳಲ್ಲಿ ಮನೆ ಕಟ್ಟಿಕೊಂಡವರು ಕಂದಾಯಕ್ಕೆ ಒಳಪಡದವರಿಗೆ ಸಕ್ರಮ ಮಾಡಲು ಯಾವ ಕ್ರಮವಹಿಸಬಹುದಾಗಿದೆ ;

(ಈ) ಕಂದಾಯಕ್ಕೆ ಒಳಪಡದವರಿಗೆ ಅಕ್ರಮ ಮನೆಗಳನ್ನು ಸಕ್ರಮಗೊಳಿಸಲು ಅವಕಾಶವಿಲ್ಲವೇ ? (ವಿವರ ನೀಡುವುದು)

## ಅಕ್ರಮ ಸಕ್ರಮ ಅರ್ಜಿಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೨ (೧೩೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಿಂದ ಪ್ರಸ್ತುತ ದಿನಾಂಕದವರೆಗೆ ರಾಜ್ಯದಲ್ಲಿನ ತಾಲ್ಲೂಕು ಕೇಂದ್ರಗಳಲ್ಲಿ ಅಕ್ರಮ ಸಕ್ರಮ ಸಮಿತಿಗೆ ಬಂದಿರುವ ಅರ್ಜಿ / ಪ್ರಸ್ತಾವನೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಅರ್ಜಿಗಳಲ್ಲಿ ವಿಲೇವಾರಿಯಾದ ಅರ್ಜಿಗಳ ಸಂಖ್ಯೆ ಎಷ್ಟು ;

(ಇ) ವಿಲೇವಾರಿಗೆ ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿಯಿರಲು ಕಾರಣಗಳೇನು ;

(ಈ) ಬಂದ ಅರ್ಜಿಗಳಲ್ಲಿ ತಿರಸ್ಕೃತವಾದ ಅರ್ಜಿಗಳೆಷ್ಟು ; ಅವುಗಳಾವುವು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಚಿರತೆ ಪ್ರತ್ಯಕ್ಷವಾಗಿರುವ ಪ್ರಕರಣಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೧೩೩ (೧೭೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಐದು ವರ್ಷಗಳಿಂದ ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ಚಿರತೆ ಪ್ರತ್ಯಕ್ಷವಾದ ಎಷ್ಟು ಪ್ರಕರಣಗಳು ದಾಖಲಾಗಿವೆ ; (ವಿವರ ನೀಡುವುದು)

(ಆ) ಚಿರತೆಯು ಪ್ರಾಣಿಗಳ ಮೇಲೆ ಮತ್ತು ಮನುಷ್ಯರ ಮೇಲೆ ದಾಳಿ ಮಾಡಿದ ಪ್ರಕರಣಗಳು ಎಷ್ಟು ; (ವಿವರ ನೀಡುವುದು)

(ಇ) ಈ ಚಿರತೆಗಳನ್ನು ಸೆರೆಹಿಡಿಯಲು ಅರಣ್ಯ ಇಲಾಖೆ ಕೈಗೊಂಡಿರುವ ಕ್ರಮಗಳೇನು ;

(ಈ) ಇಲ್ಲಿಯವರೆಗೆ ಎಷ್ಟು ಚಿರತೆಗಳನ್ನು ಸೆರೆಹಿಡಿಯಲಾಗಿದೆ ; ಸೆರೆಹಿಡಿದ ಚಿರತೆಗಳನ್ನು ಯಾವ ಅರಣ್ಯ ಪ್ರದೇಶಕ್ಕೆ ಬಿಡಲಾಗಿದೆ ?

## ಕೊಪ್ಪ ಗ್ರಾಮದ ಕೆರೆ ಒತ್ತುವರಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೧೩೪ (೧೮೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕು, ಕೊಪ್ಪ ಗ್ರಾಮದ ಕೆರೆಯ ಒಟ್ಟು ವಿಸ್ತೀರ್ಣ ಎಷ್ಟು ಈ ಕೆರೆಯ ಅಚ್ಚುಕಟ್ಟು ಪ್ರದೇಶ ಎಷ್ಟು ; (ವಿವರ ನೀಡುವುದು)

(ಆ) ಆ ಪೈಕಿ ಒತ್ತುವರಿಯಾಗಿರುವ ಕೆರೆಯ ವಿಸ್ತೀರ್ಣವೆಷ್ಟು ; ತೆರವುಗೊಳಿಸಿರುವ ವಿಸ್ತೀರ್ಣ ಎಷ್ಟು ; (ವಿವರ ನೀಡುವುದು)

(ಇ) ಸದರಿ ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸದರಿ ಕೆರೆ ಹೂಳು ತೆಗೆಯಲು ಮತ್ತು ಅಭಿವೃದ್ಧಿ ಪಡಿಸಲು ನಿಗಧಿ ಪಡಿಸಿದ ಅನುದಾನ ಎಷ್ಟು ;

(ಉ) ಇದರಲ್ಲಿ ಖರ್ಚು ಮಾಡಿರುವ ಅನುದಾನ ಎಷ್ಟು ?

## ಮಂಡ್ಯ ಜಿಲ್ಲೆಯ ನೀರಾವರಿ ಯೋಜನೆಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೧೩೫ (೧೪೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪ರಿಂದ ೨೦೧೭–೧೮ರವರೆಗೆ ಮಂಡ್ಯ ಜಿಲ್ಲೆಯಲ್ಲಿ ನೀರಾವರಿ ಯೋಜನೆಗಳಿಗೆ ನಿಗಧಿಪಡಿಸಿದ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಈ ಯೋಜನೆಗಳಿಗೆ ಇಲ್ಲಿಯವರೆಗೆ ಖರ್ಚು ಮಾಡಿರುವ ಮೊತ್ತ ಎಷ್ಟು ; ವರ್ಷಾವಾರು ವಿವರ ನೀಡುವುದು ;

(ಇ) ಈ ಅವಧಿಯಲ್ಲಿ ಮಂಜೂರಾದ ಒಟ್ಟು ಕಾಮಗಾರಿಗಳ ಸಂಖ್ಯೆ ಎಷ್ಟು ; ಇದರಲ್ಲಿ ಪೂರ್ಣಗೊಂಡ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಅಪೂರ್ಣ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಪೊನ್ನಂಪೇಟೆ ಹಾಗೂ ಕಾವೇರಿ ಹೊಸ ತಾಲ್ಲೂಕುಗಳನ್ನು ರಚಿಸುವ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೬ (೧೬೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಪೊನ್ನಂಪೇಟೆ ಹಾಗೂ ಕಾವೇರಿ ಹೊಸ ತಾಲ್ಲೂಕುಗಳನ್ನು ರಚಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ;

(ಆ) ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ಹೊಸ ತಾಲ್ಲೂಕುಗಳನ್ನು ರಚಿಸಲಾಗುವುದು ;

(ಇ) ಹೊಸ ತಾಲ್ಲೂಕುಗಳಾಗಿ ರಚನೆಗೊಳ್ಳಲು ಬೇಕಾದ ಎಲ್ಲಾ ಮಾನದಂಡಗಳನ್ನು ಹೊಂದಿರುವ ಹಾಗೂ ತಾಲ್ಲೂಕು ಕೇಂದ್ರಕ್ಕೆ ಬೇಕಾದ ಬಹುತೇಕ ಮೂಲಭೂತ ಸೌಕರ್ಯಗಳನ್ನು ಹೊಂದಿರುವ ಇವುಗಳನ್ನು ಹೊಸ ತಾಲ್ಲೂಕುಗಳಾಗಿ ರಚಿಸಲು ಇರುವ ತೊಂದರೆಗಳೇನು ಹಾಗೂ ಅಡ್ಡಿಯಾಗಿರುವ ಮಾನದಂಡಗಳೇನು ?

## ಹಾಕಿ ಆಟಗಾರರಿಗೆ ಅಂತರ್‌ರಾಷ್ಟ್ರೀಯ ಮಟ್ಟದ ತರಬೇತಿ ಹಾಗೂ ಸೌಲಭ್ಯಗಳನ್ನು ಕಲ್ಪಿಸುವ ಕುರಿತು.

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೭ (೧೬೬) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಹಾಕಿ ಆಟಗಾರರಿಗೆ ಅಂತರ್‌ರಾಷ್ಟ್ರೀಯ ಮಟ್ಟದ ತರಬೇತಿ, ಸೌಲಭ್ಯ ಹಾಗೂ ವೃತ್ತಿಪರತೆ ಸಿಗುವಂತಾಗಲು ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳೇನು ;

(ಆ) ಕೊಡಗು ಜಿಲ್ಲೆಯಲ್ಲಿ ಸಾಕಷ್ಟು ಹಾಕಿ ಪ್ರತಿಭೆಗಳು ಇರುವುದರಿಂದ, ಅವರನ್ನು ಅಂತರ್‌ರಾಷ್ಟ್ರೀಯ ಮಟ್ಟದ ಕ್ರೀಡಾಳುಗಳನ್ನಾಗಿ ರೂಪಿಸಲು ಅನುವಾಗುವಂತೆ ಸುಸಜ್ಜಿತ ಮೈದಾನ, ನುರಿತ ಕೋಚ್ ಹಾಗೂ ಇತರೆ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕ್ರಮವಹಿಸುವುದೇ? (ವಿವರ ನೀಡುವುದು)

## ರಾಜ್ಯದಲ್ಲಿ ಅಂತರ್ಜಲ ಮರುಪೂರಣಕ್ಕೆ ಸಣ್ಣ ನೀರಾವರಿ ಇಲಾಖೆ ರೂಪಿಸಿರುವ ಕಾರ್ಯಕ್ರಮಗಳ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೮ (೧೩೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಂತರ್ಜಲ ಮರುಪೂರಣಕ್ಕೆ ಇಲಾಖೆ ರೂಪಿಸಿರುವ ಕಾರ್ಯಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಪ್ರತಿ ಕಾರ್ಯಕ್ರಮ/ಯೋಜನೆ ಅನುಷ್ಠಾನಕ್ಕೆ ವಿನಿಯೋಗಿಸಿರುವ ಅನುದಾನವೆಷ್ಟು ; (ವರ್ಷಾವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಕಾರ್ಯಕ್ರಮಗಳ ಯಶಸ್ವಿಗೆ ಸಾರ್ವಜನಿಕ ಸಹಭಾಗಿತ್ವ ಅತ್ಯಂತ ಪ್ರಮುಖವಾಗಿರುವುದರಿಂದ ಆ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಿಕ್ಷಾ ಚಾಲಕರುಗಳ ಕಲ್ಯಾಣ ಯೋಜನೆಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೪೯ (೧೪೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ರಿಕ್ಷಾ ಚಾಲರುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು) ರಿಕ್ಷಾ ಚಾಲಕರುಗಳಿಗೆ ಇಲಾಖೆಯಿಂದ ಯಾವ ಯಾವ ಯೋಜನೆಗಳು ಜಾರಿಯಲ್ಲಿವೆ; (ವಿವರ ಒದಗಿಸುವುದು)

(ಆ) ಅಸಂಘಟಿತ ಕಾರ್ಮಿಕರಿಗೆ ರಕ್ಷಣೆ ಒದಗಿಸಲು ಇಲಾಖೆ ಮುಂದಿರುವ ಪ್ರಸ್ತಾವನೆಗಳು ಯಾವುವು ; (ವಿವರ ಒದಗಿಸುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು ಎಷ್ಟು ಅಸಂಘಟಿತ ಕಾರ್ಮಿಕರನ್ನು ವಿವಿಧ ಯೋಜನೆಗಳ ನೆಲೆಯಲ್ಲಿ ನೋಂದಾಯಿಸಿಕೊಳ್ಳಲಾಗಿದೆ? (ವಿವರ ಒದಗಿಸುವುದು)

## ರಾಜ್ಯದಲ್ಲಿ ೯೪ಸಿ ಮತ್ತು ೯೪ಸಿಸಿ ಗಳ ಅರ್ಜಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೪೦ (೧೫೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೯೪ಸಿ ಮತ್ತು ೯೪ಸಿಸಿಗಳ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ ; ಸ್ವೀಕರಿಸಲಾದ ಎಷ್ಟು ಅರ್ಜಿಗಳನ್ನು ಇತ್ಯರ್ಥಪಡಿಸಲಾಗಿದೆ ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ೯೪ಸಿ ಮತ್ತು ೯೪ಸಿಸಿ ಸ್ವೀಕರಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು ; ಅರ್ಜಿ ಸಲ್ಲಿಸಲು ಗೊತ್ತುಪಡಿಸಲಾಗಿದ್ದ ಕಡೆಯ ದಿನಾಂಕ ಯಾವುದು ; (ಜಿಲ್ಲಾವಾರು ವಿವರ ನೀಡುವುದು)

(ಇ) ಡೀಮ್ಡ್ (Deemed) ಫಾರೆಸ್ಟ್ ಸ್ಥಳಗಳಲ್ಲಿ ವಾಸವಾಗಿರುವ ಜನರ ಅರ್ಜಿಗಳನ್ನು ಇತ್ಯರ್ಥಪಡಿಸಲಾಗಿದೆಯೇ ; ಇತ್ಯರ್ಥ ಪಡಿಸಲಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿ ಇಡಲು ಕಾರಣ ಸಹಿತ ವಿವರ ನೀಡುವುದು ?

## ಮಂಗಳೂರಿನ ಕಾರ್ಮಿಕ ಭವನದ ಕಾಮಗಾರಿಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೪೧ (೧೫೮) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರಿನ ಕಾರ್ಮಿಕ ಭವನದ ಕಾಮಗಾರಿ ಪ್ರಾರಂಭಗೊಳ್ಳದಿರಲು ಕಾರಣವೇನು ; ಕಾರ್ಮಿಕರ ಬಗ್ಗೆ ನಿರ್ಲಕ್ಷ್ಯ ವಹಿಸಿದವರ ಬಗ್ಗೆ ಇಲಾಖೆ ಕೈಗೊಂಡ ಕ್ರಮವೇನು;

(ಆ) ಕಾರ್ಮಿಕ ಭವನಕ್ಕೆ ಮಂಜೂರಾದ ಅನುದಾನ ಬಳಕೆಯಾಗದೇ ಇರಲು ಕಾರಣವೇನು ;

(ಇ) ಅಸಂಘಟಿತ ಕಾರ್ಮಿಕರಿಗೆ ಕಾರ್ಮಿಕ ಭವನದಲ್ಲಿ ಸ್ಥಳಾವಕಾಶ ಒದಗಿಸಲಾಗಿದೆಯೇ ; (ವಿವರ ನೀಡುವುದು)

(ಈ) ಪ್ರಸ್ತುತ ಕಾರ್ಮಿಕ ಇಲಾಖೆ ಕಾರ್ಯನಿರ್ವಹಿಸುತ್ತಿರುವ ಕಟ್ಟಡದ ಬಾಡಿಗೆ ಎಷ್ಟು ; ಅಧಿಕಾರಿಗಳು ಖಾಸಗಿ ಲಾಬಿಗೆ ಮಣಿದರೆ ? (ವಿವರ ಒದಗಿಸುವುದು)

## ಕಸ್ತೂರಿ ರಂಗನ್ ವರದಿಯ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೪೨ (೧೫೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಸ್ತೂರಿ ರಂಗನ್ ವರದಿ ಜಾರಿಗೊಳಿಸಲಾಗಿದೆಯೇ ; ಈ ಬಗ್ಗೆ ರಾಜ್ಯ ಸರ್ಕಾರ ಸಲ್ಲಿಸಿದ ಆಕ್ಷೇಪಣೆಗಳನ್ನು ಕೇಂದ್ರ ಸರ್ಕಾರ ಪರಿಗಣಿಸಿದೆಯೇ ; ಪರಿಗಣಿಸದಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಕಸ್ತೂರಿ ರಂಗನ್ ವರದಿ ಯಥಾವತ್ ಜಾರಿಯಾದರೆ ನಿರ್ವಸಿತರಾಗುವ ಕುಟುಂಬಗಳ ಸಂಖ್ಯೆ ಎಷ್ಟು ; ಯಾವ ಯಾವ ಜಿಲ್ಲೆಗಳಲ್ಲಿ ಪರಿಣಾಮ ಬೀರುವುದು ; ಪುನರ್ ವಸತಿಗಾಗಿ ಸರ್ಕಾರದ ಮುಂದೆ ಇರುವ ಪ್ರಸ್ತಾವನೆ ಯಾವುದು ; ವಿವರ ನೀಡುವುದು ;

(ಇ) ಕಸ್ತೂರಿ ರಂಗನ್ ವರದಿಯಿಂದ ಉಂಟಾಗುವ ತೊಂದರೆಗಳ ಬಗ್ಗೆ ಸ್ಥಳೀಯರಿಂದ ಆಕ್ಷೇಪಣೆಗಳನ್ನು ಇಲಾಖೆ ಸ್ವೀಕರಿಸಿದೆಯೇ; ವಿವರ ಒದಗಿಸುವುದು ;

(ಈ) ಡೀಮ್ಡ್ ಫಾರೆಸ್ಟ್ ಪ್ರದೇಶದಲ್ಲಿ ವಾಸವಾಗಿರುವವರಿಗೆ ಹಕ್ಕುಪತ್ರ ನೀಡಲು ನಿರಾಪೇಕ್ಷಣಾ ಪತ್ರ ನೀಡಿದೆಯೇ ; (ವಿವರ ನೀಡುವುದು)

## ಮಂಗಳೂರು ನಗರದಲ್ಲಿ ಕ್ರೀಡೆಗಾಗಿ ಸ್ಪೋಟ್ಸ್ ಕಾಂಪ್ಲೆಕ್ಸ್ ನಿರ್ಮಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೪೩ (೧೫೫) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ನಗರದ ಪೂರ್ವದಲ್ಲಿ ಮಲ್ಟಿಸ್ಪೋರ್ಟ್ಸ್ ಕಾಂಪ್ಲೆಕ್ಸ್‌ನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದಕ್ಕೆ ಮೀಸಲಿಟ್ಟ ಹಣವೆಷ್ಟು ; ಯಾವ ಯಾವ ಕ್ರೀಡೆಗಾಗಿ ಈ ಸ್ಪೋರ್ಟ್ಸ್ ಕಾಂಪ್ಲೆಕ್ಸ್‌ನ್ನು ನಿರ್ಮಿಸಲಾಗುತ್ತಿದೆ ; (ವಿವರ ನೀಡುವುದು)

(ಆ) ಕಬಡ್ಡಿ ಕ್ರೀಡೆಯನ್ನು ಪ್ರೋತ್ಸಾಹಿಸಲು ಇಲಾಖೆ ನೀಡುವ ಪ್ರೋತ್ಸಾಹ ಧನ ಎಷ್ಟು ; (ವಿವರ ಒದಗಿಸುವುದು)

(ಇ) ಕ್ರೀಡಾ ಇಲಾಖೆ ಹಾಸ್ಟೆಲ್‌ನಲ್ಲಿ ಪುರುಷರು ಮತ್ತು ಮಹಿಳೆಯರು ಒಂದೇ ಕಟ್ಟಡದಲ್ಲಿ ವಸತಿ ಸೌಕರ್ಯದಲ್ಲಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮವೇನು;

(ಈ) ರಾಜ್ಯದಲ್ಲಿ ಕ್ರೀಡಾ ಹಾಸ್ಟೆಲ್‌ನಲ್ಲಿ ವಾರ್ಡನ್ ಮತ್ತು ಅಡುಗೆ ಮಾಡುವವರ ಕೊರತೆ ಇದ್ದು ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮವೇನು ;

(ಉ) ಕ್ರೀಡಾ ಇಲಾಖೆಯಲ್ಲಿ ಖಾಲಿ ಇರುವ ಉಪ ನಿರ್ದೇಶಕರುಗಳ ಹುದ್ದೆ ಎಷ್ಟು ; ಪ್ರಭಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಹುದ್ದೆ ಎಷ್ಟು ; (ವಿವರ ಒದಗಿಸುವುದು)

(ಊ) ಕ್ರೀಡಾ ಇಲಾಖೆಯಿಂದ ಮೂಡಬಿದ್ರೆಯಲ್ಲಿ ನಿರ್ಮಿಸಲಾದ ಸಿಂಥೆಟಿಕ್ ಟ್ರಾಕ್‌ಗೆ ಖರ್ಚು ಮಾಡಿದ ವೆಚ್ಚವೆಷ್ಟು ; ಇದರ ನಿರ್ವಹಣೆ ಇಲಾಖೆಯಿಂದ ನಿರ್ವಹಿಸಲಾಗುತ್ತಿದೆಯೇ ? (ವಿವರ ಒದಗಿಸುವುದು)

## ಸಾಮಾಜಿಕ ಅರಣ್ಯದಡಿಯಲ್ಲಿ ನೆಟ್ಟ ಸಸಿಗಳ ನಿರ್ವಹಣೆ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೧೪೪ (೯೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಸಾಮಾಜಿಕ ಅರಣ್ಯದಡಿಯಲ್ಲಿ ಇಲಾಖೆ ವತಿಯಿಂದ ಎಷ್ಟು ಸಸಿಗಳನ್ನು ಕಳೆದ ೦೩ ವರ್ಷಗಳಲ್ಲಿ ನೆಡಸಲಾಗಿದೆ; (ಅಂಕಿಅಂಶಗಳನ್ನು ನೀಡುವುದು)

(ಆ) ಈಗಾಗಲೇ ನೆಡಲಾದ ಸಸಿಗಳು ನಿರ್ವಹಣೆ ವಂಚಿತವಾಗಿ ನಾಶವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ತೆಗೆದುಕೊಂಡ ಕ್ರಮಗಳೇನು ;

(ಇ) ಸಸಿ ನೆಡುವ ಪ್ರದೇಶಗಳಲ್ಲಿ ನೆಟ್ಟ ಗಿಡಗಳನ್ನು ಸಂರಕ್ಷಿಸುವ ಮತ್ತು ಬೆಳೆಸುವ ಕಾರ್ಯ ನಿರ್ವಹಣೆಗೆ ಸ್ಥಳೀಯ ಮಹಿಳಾ ಸ್ವ–ಸಹಾಯ ಸಂಘಗಳ ಸಹಕಾರ ಪಡೆಯಲು ಸರ್ಕಾರ ಚಿಂತನೆ ನಡೆಸಿದೆಯೇ ? (ವಿವರ ನೀಡುವುದು)

## ಹೊಸ ಕಂದಾಯ ತಾಲ್ಲೂಕುಗಳ ಅಸ್ತಿತ್ವದ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೪೫ (೧೨೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಇತ್ತೀಚಿಗೆ ಸರ್ಕಾರ ಘೋಷಿಸಿರುವ ಹೊಸ ಕಂದಾಯ ತಾಲ್ಲೂಕುಗಳು ಅಸ್ತಿತ್ವಕ್ಕೆ ಬಂದಿವೆಯೇ ; ಬಂದಿದ್ದಲ್ಲಿ, ವಿವರಗಳನ್ನು ನೀಡುವುದು ;

(ಆ) ಹೊಸ ತಾಲ್ಲೂಕು ರಚನೆಯಾಗಿದ್ದಲ್ಲಿ, ಯಾವ ಯಾವ ಇಲಾಖಾ ಕಛೇರಿಗಳು ಅಸ್ತಿತ್ವಕ್ಕೆ ಬಂದಿದೆ ; (ವಿವರಗಳನ್ನು ನೀಡುವುದು)

(ಇ) ಹೊಸ ತಾಲ್ಲೂಕು ರಚನೆಯಾಗಿದ್ದಲ್ಲಿ, ಎಷ್ಟು ಕಾಲಮಿತಿಯೊಳಗೆ ಎಲ್ಲಾ ಇಲಾಖೆಯ ಕಛೇರಿಗಳನ್ನು ಕಂದಾಯ/ಆರ್ಥಿಕ ಇಲಾಖೆಯ ಸಹಯೋಗದೊಂದಿಗೆ ಸ್ಥಾಪಿಸಲಾಗುವುದು ? (ವಿವರಗಳನ್ನು ನೀಡುವುದು)

## ಅಸಂಘಟಿತ ಕಟ್ಟಡ ಕಾಮಗಾರಿ ಕಾರ್ಮಿಕರ ಕಲ್ಯಾಣ ಯೋಜನೆ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೧೪೬ (೧೨೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಅಸಂಘಟಿತ ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರದಿಂದ ಜಾರಿಗೊಳಿಸಿರುವ ಯೋಜನೆಗಳ ಸೌಲಭ್ಯವನ್ನು ಕಟ್ಟಡ ನಿರ್ಮಾಣ ಕಾಮಗಾರಿಯಲ್ಲಿ ತೊಡಗಿರುವ ಕಾರ್ಮಿಕರು ಪಡೆಯಲು ಕಷ್ಟ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಾರ್ಮಿಕ ಇಲಾಖೆಯಿಂದ ಎಷ್ಟು ಅಸಂಘಟಿತ ಕಾರ್ಮಿಕರು ಇಲಾಖೆಯಲ್ಲಿ ನೋಂದಣಿ ಆಗಿರುತ್ತಾರೆ; (ಜಿಲ್ಲಾವಾರು ಅಂಕಿ ಅಂಶಗಳನ್ನು ನೀಡುವುದು)

(ಇ) ಮಾಹಿತಿ ಕೊರತೆಯಿಂದಾಗಿ ನೋಂದಾವಣೆ ಆಗದೇ ಉಳಿದ ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲು ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು)

(ಈ) ಕಾರ್ಮಿಕರ ಹೆರಿಗೆ ವೆಚ್ಚಕ್ಕಾಗಿ ಹಾಗೂ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಸರ್ಕಾರದಿಂದ ಸಹಾಯಧನವನ್ನು ಎಷ್ಟು ಫಲಾನುಭವಿಗಳಿಗೆ ನೀಡಲಾಗಿದೆ? (ಜಿಲ್ಲಾವಾರು ಅಂಕಿ ಅಂಶಗಳನ್ನು ನೀಡುವುದು)

## ಗ್ರಾಮೀಣ ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೭ (೯೮) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಗ್ರಾಮೀಣ ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ, ಪ್ರೋತ್ಸಾಹಿಸಿ, ತರಬೇತಿಗೊಳಿಸಿ ಅವರನ್ನು ರಾಜ್ಯ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಕ್ರೀಡಾಪಟುಗಳನ್ನಾಗಿಸಲು ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳಾವುವು; (ವಿವರ ನೀಡುವುದು)

(ಆ) ಈ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ಗ್ರಾಮೀಣ ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ ಅವರುಗಳಿಗೆ ತರಬೇತಿ ನೀಡಲಾಗಿದೆ/ ನೀಡಲಾಗುತ್ತಿದೆ; (ವರ್ಷವಾರು, ಅಭ್ಯರ್ಥಿಗಳವಾರು ವಿವರ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ಮೇಲ್ದರ್ಜೆಗೇರಿಸಲಾಗಿರುವ ಕ್ರೀಡಾಂಗಣ, ಮೈದಾನಗಳ ಸಂಖ್ಯೆ ಎಷ್ಟು; ಸರ್ಕಾರದ ಮುಂದಿರುವ ಪ್ರಸ್ತಾವನೆಗಳೆಷ್ಟು; ನಿರ್ಮಾಣ ಮಾಡಲಾಗಿರುವ ಹೊಸ ಕ್ರೀಡಾಂಗಣಗಳ ಸಂಖ್ಯೆ ಎಷ್ಟು; (ವರ್ಷಾವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ಈ ಕ್ರೀಡಾಂಗಣ, ಮೈದಾನಗಳ ನಿರ್ವಹಣೆಗಾಗಿ ಖರ್ಚು ಮಾಡಿರುವ ಹಣವೆಷ್ಟು? (ವರ್ಷವಾರು ಕ್ರೀಡಾಂಗಣ, ಮೈದಾನವಾರು ವಿವರ ನೀಡುವುದು)

## ಸಾಮಾಜಿಕ ಮತ್ತು ಕೃಷಿ ಅರಣ್ಯ ಅನುದಾನದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೮ (೯೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ಸಾಮಾಜಿಕ, ಕೃಷಿ ಅರಣ್ಯ ಮತ್ತು ಕಾಯ್ದಿರಿಸಿದ ಅರಣ್ಯ ಪ್ರದೇಶಗಳಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಅರಣ್ಯಗಳಿಗೆ ಕಳೆದ ೩ ವರ್ಷಗಳಲ್ಲಿ ಅರಣ್ಯ ಇಲಾಖೆಯಿಂದ ನೀಡಿರುವ ಅನುದಾನ ಎಷ್ಟು; (ಜಿಲ್ಲಾವಾರು, ವರ್ಷಾವಾರು ವಿವರ ನೀಡುವುದು)

(ಇ) ಅರಣ್ಯ ಇಲಾಖೆಯು ಈ ಮೂರು ಜಿಲ್ಲಾ ಪಂಚಾಯತ್/ ಪಂಚಾಯಿತಿಗಳಿಗೆ ಕಳೆದ ೩ ವರ್ಷಗಳಲ್ಲಿ ನೀಡಿರುವ ಆರ್ಥಿಕ ನೆರವು ಎಷ್ಟು ? (ಜಿಲ್ಲಾವಾರು, ವರ್ಷಾವಾರು ಸಂಪೂರ್ಣ ವಿವರ ನೀಡುವುದು)

## ಡೀಮ್ಡ್ ವಿಶ್ವ ವಿದ್ಯಾಲಯಗಳ ನೌಕರರ ಸೌಲಭ್ಯಗಳ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೯ (೯೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಹಿತದೃಷ್ಟಿಯನ್ನು ಕಾಪಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಆ) ಈ ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಕಾರ್ಮಿಕ ಇಲಾಖೆಯ ರೀತಿ–ನಿಯಮಗಳು ಅನ್ವಯವಾಗುವುದೇ; ಹಾಗಿದ್ದಲ್ಲಿ, ಅವುಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ಈ ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ನೌಕರರ ಕರ್ತವ್ಯದ ವೇಳೆಯನ್ನು ಸರ್ಕಾರದ ಆದೇಶದ ಪ್ರಕಾರ ಯಾವ ರೀತಿ ನಿಗಧಿಪಡಿಸಿದೆ; ಇದನ್ನು ಮೀರಿದಲ್ಲಿ ಸರ್ಕಾರವು ಯಾವ ರೀತಿಯಲ್ಲಿ ಅವರುಗಳ ವಿರುದ್ಧ ಕಠಿಣ ಕ್ರಮಕೈಗೊಳ್ಳಲಾಗುವುದು; ಸರ್ಕಾರವು ಇದನ್ನು ಯಾವ ರೀತಿ ಗುರುತಿಸುತ್ತದೆ;

(ಈ) ಈ ಡೀಮ್ಡ್ ವಿಶ್ವವಿದ್ಯಾಲಯಗಳ ಮೇಲೆ ಸರ್ಕಾರಕ್ಕಿರುವ ಅಧಿಕಾರವೇನು; ಸಂಪೂರ್ಣ ವಿವರ ಹಾಗೂ ಈ ಕುರಿತು ಇರುವ ಸರ್ಕಾರಿ ಆದೇಶದ ಪ್ರತಿಯೊಂದಿಗೆ ಮಾಹಿತಿ ನೀಡುವುದು?

## ಕೆರೆ ಹೂಳು ತೆಗೆಯುವ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೦ (೧೩೪) ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಒಟ್ಟು ಎಷ್ಟು ಕೆರೆಗಳಿವೆ; ಅವುಗಳು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ಹೂಳು ತೆಗೆದು ಜೀರ್ಣೋದ್ಧಾರ ಮಾಡಲು ಯಾವ ಯಾವ ಕೆರೆಗಳನ್ನು ಆಯ್ಕೆ ಮಾಡಲಾಗಿದೆ; ಈವರೆಗೆ ಎಷ್ಟು ಕೆರೆಗಳ ಹೂಳು ತೆಗೆಯಲಾಗಿದೆ; ಇದಕ್ಕೆ ತಗುಲಿದ ವೆಚ್ಚವೆಷ್ಟು? (ವರ್ಷಾವಾರು, ಕೆರೆಗಳವಾರು ಸಂಪೂರ್ಣ ವಿವರ ನೀಡುವುದು)

## ಕಬಿನಿ ಬಲದಂಡೆ ನಾಲೆಯಿಂದ ನೀರು ಹರಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೧ (೧೧೫) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಬಿನಿ ಬಲದಂಡೆ ನಾಲೆಯಿಂದ ಕೆರೆ ಕಟ್ಟೆಗಳಿಗೆ ನೀರು ತುಂಬಿಸುವ ಬಗ್ಗೆ ಕಟ್ಟುಪದ್ಧತಿಯ ಪ್ರಕಾರ ಯಾವಾಗ ನೀರನ್ನು ಹರಿಸಲು ಕ್ರಮ ಜರುಗಿಸಲಾಗುವುದು;

(ಆ) ಈಗಾಗಲೇ ಕಬಿನಿ ಜಲಾಶಯದ ನಾಲೆಗಳ ವ್ಯಾಪ್ತಿಯಲ್ಲಿ ಬರುವ ರೈತರು ಬೆಳೆಗೆ ಮತ್ತು ಕೆರೆ ಕಟ್ಟೆಗಳಿಗೆ ನಾಲೆಯಿಂದ ನೀರು ಹರಿಸಲು ಒತ್ತಾಯಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಉದ್ಯೋಗ ಮೇಳ ನಡೆಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೨ (೯೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಸರ್ಕಾರದ ಉದ್ಯೋಗ ಮತ್ತು ತರಬೇತಿ ಇಲಾಖೆಯ ಆಶ್ರಯದಲ್ಲಿ ಉದ್ಯೋಗ ಮೇಳವನ್ನು ನಡೆಸಲಾಗುವುದು ಯಾವಾಗ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು;

(ಆ) ಮುಖ್ಯಮಂತ್ರಿಯವರ ಕೌಶಲ್ಯಾಭಿವೃದ್ಧಿ ಯೋಜನೆ ಪ್ರಕಾರ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ನೋಂದಾಯಿಸಿಕೊಂಡಿರುವ ಉದ್ಯೋಗಾರ್ಥಿಗಳ ಸಂಖ್ಯೆ ಎಷ್ಟು?

## ಮೈಸೂರು ಚಾಮರಾಜನಗರ ಜಿಲ್ಲೆಯಲ್ಲಿ ವಿವಿಧ ವಸತಿ ಯೋಜನೆಗಳ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೩ (೧೧೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯ ಗ್ರಾಮ ಪಂಚಾಯಿತಿ,

ಪಟ್ಟಣ ಪಂಚಾಯಿತಿ ಮತ್ತು ಪುರಸಭೆ, ನಗರಸಭೆಗಳ ವ್ಯಾಪ್ತಿಯಲ್ಲಿ, ಪ್ರಧಾನ ಮಂತ್ರಿ ಆವಾಸ್, ವಾಜಪೇಯಿ ವಸತಿ, ಅಂಬೇಡ್ಕರ್ ಆವಾಸ್, ಹಾಗೂ ರಾಜ್ಯ ಸರ್ಕಾರದ ಇತರ ವಸತಿ ಯೋಜನೆಗಳ ಅನ್ವಯ ಕೈಗೊಂಡಿರುವ ಗೃಹ ನಿರ್ಮಾಣ ಯೋಜನೆಗಳು ಯಾವುವು; ಎಷ್ಟು ವಸತಿ ಗೃಹಗಳನ್ನು ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗಿದೆ;

(ಆ) ಆಯ್ಕೆಯಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು;

(ಇ) ಸದರಿ ಯೋಜನೆಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಒದಗಿಸಿರುವ ಅನುದಾನ ಎಷ್ಟು; ಫಲಾನುಭವಿಗಳಿಗೆ ಬಿಡುಗಡೆ ಆಗಿರುವ ಹಣ; ಮನೆಗಳ ನಿರ್ಮಾಣದ ಪ್ರಗತಿಯ ವಿವರಗಳನ್ನು ಒದಗಿಸುವುದು;

(ಈ) ಮೇಲ್ಕಂಡ ಯೋಜನೆಗಳ ಫಲಾನುಭವಿಗಳಿಗೆ ಸಕಾಲದಲ್ಲಿ ಅನುದಾನವನ್ನು ಬಿಡುಗಡೆ ಮಾಡಿ ಮನೆಗಳ ನಿರ್ಮಾಣ ಕಾರ್ಯವನ್ನು ಬೇಗ ಪೂರ್ಣಗೊಳಿಸಲು ಕ್ರಮ ಜರುಗಿಸಲಾಗುವುದೇ; ಚಾಮರಾಜನಗರ ಜಿಲ್ಲೆ ಹನೂರು ಪಟ್ಟಣ ಪಂಚಾಯಿತಿಯಲ್ಲಿ ಕೈಗೊಂಡಿರುವ ವಸತಿ ಯೋಜನೆಗಳು ಮಂದಗತಿಯಿಂದ ನಡೆಯುತ್ತಿರುವುದರಿಂದ ಫಲಾನುಭವಿಗಳಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ವರಾಹಿ ಏತ ನೀರಾವರಿ ಯೋಜನೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೪ (೧೮೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವರಾಹಿ ಏತ ನೀರಾವರಿ ಯೋಜನೆಗೆ ಮುಖ್ಯಮಂತ್ರಿಯವರಿಂದ ಶಂಕುಸ್ಥಾಪನೆ ಯಾವ ದಿನಾಂಕದಂದು ಮತ್ತು ಯಾವಾಗ ನೆರವೇರಿಸಲಾಯಿತು; ಈ ವರಾಹಿ ಏತ ನೀರಾವರಿ ಯೋಜನೆಯ ಅಂದಾಜು ಮೊತ್ತವೆಷ್ಟು;

(ಆ) ವರಾಹಿ ಏತ ನೀರಾವರಿ ಯೋಜನೆಯ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡು ಕರಾರು ಪತ್ರವನ್ನು ಮಾಡಿಕೊಳ್ಳಲಾಗಿದೆಯೇ; ಹೌದಾದಲ್ಲಿ ಕಾಮಗಾರಿಯ ಕರಾರು ಮೊತ್ತವೆಷ್ಟು; ಇಲ್ಲವಾದಲ್ಲಿ ಕಾರಣವೇನು; (ಟೆಂಡರ್ ನೋಟಿಫಿಕೇಶನ್ ಮತ್ತು ಕರಾರು ಪತ್ರದ ಪ್ರತಿಯನ್ನು ಒದಗಿಸುವುದು)

(ಇ) ವರಾಹಿ ಏತ ನೀರಾವರಿ ಯೋಜನೆಯನ್ನು ಯಾವಾಗ ಪೂರ್ಣಗೊಳಿಸಲಾಗುವುದು?

## ಕಾಡು ಪ್ರಾಣಿಗಳ ಹಾವಳಿಯಿಂದ ಬೆಳೆ ಹಾನಿಯಾಗುತ್ತಿರುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೫ (೯೯೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ರೈತರು ಕಾಡು ಪ್ರಾಣಿಗಳ ಹಾವಳಿಯಿಂದ ಬೆಳೆಹಾನಿ ಹೊಂದುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಾಡು ಪ್ರಾಣಿ ಹಾವಳಿಯಿಂದ ಬೆಳೆ ಹಾನಿ ಪರಿಹಾರಕ್ಕಾಗಿ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು; ಈವರೆಗೆ ಪರಿಹಾರ ನೀಡಿದ ಮೊತ್ತವೆಷ್ಟು ; ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ರೈತರ ಕೃಷಿಯು ದೇಶದ ಸಂಪತ್ತು ಕೂಡಾ ಆಗಿರುವ ಹಿನ್ನೆಲೆಯಲ್ಲಿ ಕಾಡು ಪ್ರಾಣಿಗಳಿಂದ ರಕ್ಷಣೆಗೆ ಮಗಾಂನರೇಗ ಯೋಜನೆಯಲ್ಲಿ ದಿನಕ್ಕೆ ೨ ರಿಂದ ೩ ಹಾಜರಾತಿ ನೀಡಿ ಕಾವಲು ಕಾಯಲು ಕಾವಲುಗಾರನ ನೇಮಕಕ್ಕೆ ಅವಕಾಶ ಕಲ್ಪಿಸಲಾಗುವುದೇ;

(ಇ) ಕಾಡು ಪ್ರಾಣಿಗಳ ಹಾವಳಿಯಿಂದ ಅತಿ ಹೆಚ್ಚು ನಷ್ಟವನ್ನು ಅನುಭವಿಸುತ್ತಿರುವ ಪ್ರದೇಶದ ರೈತರ ಸಮೀಕ್ಷೆಯನ್ನು ನಡೆಸುವ ಉದ್ದೇಶ ಸರ್ಕಾರದ ಮುಂದಿದೆಯೆ; ಈ ಸಮೀಕ್ಷೆಯಿಂದ ಕಾಡು ಪ್ರಾಣಿಗಳ ಹಾನಿಗೆ ಒಳಗಾಗುತ್ತಿರುವ ರೈತರಿಗೆ ಪರಿಹಾರ ನೀಡಲು ಹಾಗೂ ತಡೆಬೇಲಿ ನಿರ್ಮಿಸಲು ಸಹಕಾರಿಯಾಗುವುದನ್ನು ಸರಕಾರವು ಗಮನಿಸಿದೆಯೇ?

## ಆಯುಧ ಪರವಾನಗೆ ಹೊಸದಾಗಿ ಮತ್ತು ನವೀಕರಣಗೊಳಿಸುವ ಮಾರ್ಗಸೂಚಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೬ (೧೯೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಯುಧ ಪರವಾನಗೆಯನ್ನು ಹೊಸದಾಗಿ ಪಡೆಯಲು ಹಾಗೂ ನವೀಕರಣಗೊಳಿಸಲು ಸರ್ಕಾರದಿಂದ ಮಾರ್ಗಸೂಚಿಯನ್ನು ಹೊರಡಿಸಲಾಗಿದೆಯೇ ; (ಆದೇಶದ ಪ್ರತಿ ಒದಗಿಸುವುದು)

(ಆ) ಆಯುಧ ಪರವಾನಗೆ ಶುಲ್ಕವನ್ನು ರೂ. ೨೫೦ ರಿಂದ ರೂ. ೧೫೦೦ಕ್ಕೆ ಏರಿಸಿರುವುದರಿಂದ ರೈತರಿಗೆ ಆರ್ಥಿಕ ಹೊರೆಯಾಗಿರುವುದನ್ನು ಸರ್ಕಾರ ಗಮನಿಸಿದೆಯೇ; ಹೌದಾದಲ್ಲಿ ಈ ಬಗ್ಗೆ ಸರ್ಕಾರದ ಕ್ರಮವೇನು ?

# ಅಕ್ರಮ ಸಕ್ರಮ ಯೋಜನೆಯ ನಮೂನೆ ೫೦, ೫೩ ಹಾಗೂ ಭೂಸುಧಾರಣಾ ಕಾಯಿದೆ ನಮೂನೆ ೭ರ ಅರ್ಜಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೭ (೯೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈ ಸರ್ಕಾರ ಅಸ್ಥಿತ್ವಕ್ಕೆ ಬಂದ ನಂತರ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಮೂನೆ ೫೦ ಮತ್ತು ೫೩ರ ಕುರಿತು ನಡೆದ ಸಭೆಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಮಂಜೂರಾತಿಯಾದ ಅರ್ಜಿಗಳ ಸಂಖ್ಯೆ ಎಷ್ಟು; ವಿಲೇ ಮಾಡಲಾದ ಅರ್ಜಿಗಳ ಸಂಖ್ಯೆ ಎಷ್ಟು; ತಿರಸ್ಕೃತಗೊಳಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು; ತನಿಖೆಗೆ ಬಾಕಿಯಿರಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು; (ವಿಧಾನ ಸಭಾ ಕ್ಷೇತ್ರವಾರು, ದಿನಾಂಕವಾರು ಮಾಹಿತಿ ನೀಡುವುದು)

(ಆ) ಈ ಸರ್ಕಾರ ಅಸ್ಥಿತ್ವಕ್ಕೆ ಬಂದ ನಂತರ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭೂ ಸುಧಾರಣಾ ಕಾಯಿದೆಯ ನಮೂನೆ ೭ರ ಕುರಿತು ನಡೆದ ಸಭೆಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಮಂಜೂರಾತಿಯಾದ ಅರ್ಜಿಗಳ ಸಂಖ್ಯೆ ಎಷ್ಟು; ವಿಲೇ ಮಾಡಲಾದ ಅರ್ಜಿಗಳ ಸಂಖ್ಯೆ ಎಷ್ಟು; ತಿರಸ್ಕೃತಗೊಳಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು; ತನಿಖೆಗೆ ಬಾಕಿಯಿರಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು? (ವಿಧಾನಸಭಾ ಕ್ಷೇತ್ರವಾರು, ದಿನಾಂಕವಾರು ಮಾಹಿತಿ ನೀಡುವುದು)

## ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ನಿರ್ವಹಿಸಲಾಗುತ್ತಿರುವ ಕಿಂಡಿ ಅಣೆಕಟ್ಟುಗಳು ಹಾಗೂ ಕೆರೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೮ (೧೮೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪಶ್ಚಿಮವಾಹಿನಿ ಯೋಜನೆಯಡಿ ಮಂಜೂರಾತಿಯಾದ ಕಿಂಡಿ ಅಣೆಕಟ್ಟುಗಳ ಸಂಖ್ಯೆ ಎಷ್ಟು; ಅವುಗಳು ಯಾವುವು ; ಈ ಕಿಂಡಿ ಅಣೆಕಟ್ಟುಗಳ ಅಂದಾಜು ಮೊತ್ತವೆಷ್ಟು;

(ಆ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ನಿರ್ವಹಿಸಲಾಗುತ್ತಿರುವ ಕೆರೆಗಳು ಯಾವುವು; ಪ್ರಸ್ತುತ ವರ್ಷ ಅವುಗಳ ನಿರ್ವಹಣೆಗೆ ತಗಲಿದ ನಿರ್ವಹಣಾ ವೆಚ್ಚವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ನಿರ್ವಹಿಸಲಾಗುತ್ತಿರುವ ಕಿಂಡಿ ಅಣೆಕಟ್ಟುಗಳು ಯಾವುವು; ಪ್ರಸ್ತುತ ವರ್ಷ ಅವುಗಳ ನಿರ್ವಹಣೆಗೆ ತಗುಲಿದ ನಿರ್ವಹಣಾ ವೆಚ್ಚವೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಕೇಂದ್ರ ಸರ್ಕಾರದಿಂದ ಕೌಶಲ್ಯಾಭಿವೃದ್ಧಿ ಯೋಜನೆಗೆ ಮಂಜೂರಾದ ಅನುದಾನ ಹಾಗೂ ಅದರ ಬಳಕೆ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೯ (೧೨೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೌಶಲ್ಯ ಅಭಿವೃದ್ಧಿ ಯೋಜನೆಗೆ ಕೇಂದ್ರ ಸರ್ಕಾರದಿಂದ ಮಂಜೂರಾದ ಒಟ್ಟು ಅನುದಾನವೆಷ್ಟು; ಸದರಿ ಅನುದಾನದಿಂದ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ; (ವಿವರ ನೀಡುವುದು)

(ಆ) ಈ ಯೋಜನೆಯಿಂದ ಎಷ್ಟು ಜನ ನಿರುದ್ಯೋಗಿಗಳು ಉಪಯೋಗ ಪಡೆದಿದ್ದಾರೆ; (ವಿವರ ನೀಡುವುದು)

(ಇ) ರಾಜ್ಯ ಸರ್ಕಾರ ಕೌಶಲ್ಯ ಅಭಿವೃದ್ಧಿ ಯೋಜನೆಗೆ ಮೀಸಲಿಟ್ಟ ಅನುದಾನವೆಷ್ಟು; ಸ್ವ–ಉದ್ಯೋಗಕ್ಕಾಗಿ ಈ ಯೋಜನೆಯಲ್ಲಿರುವ ಅವಕಾಶಗಳೇನು; (ವಿವರ ನೀಡುವುದು)

(ಈ) ರಾಜ್ಯದಲ್ಲಿರುವ ನಿರುದ್ಯೋಗಿಗಳ ನಿರ್ದಿಷ್ಟ ಸಂಖ್ಯೆಯ ವಿವರ ಇಲಾಖೆಯ ಬಳಿ ಇದೆಯೇ; ಹಾಗಿದ್ದರೆ, ಅವರಿಗೆ ಉದ್ಯೋಗವನ್ನು ಕಲ್ಪಿಸುವ ನಿಟ್ಟಿನಲ್ಲಿ ಇಲಾಖೆಯ ಮುಂದಿರುವ ಯೋಜನೆಗಳೇನು?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0271/800 ಪ್ರತಿಗಳು/02–02–2018